ಕನ್ನಡಪ್ರಭ
ಬುಧವಾರ 6.05.2026

ಗರಿಷ್ಠ 33°c ಕನಿಷ್ಠ 22°c

ಹೆಚ್ಚಿನ ಸುದ್ದಿ ಪುಟ 9ರಲ್ಲಿ

ಬಿಜೆಪಿಗೆ ವಿಜಯ ಹಿನ್ನೆಲೆ ಕಾರ್ಯಕರ್ತರ ಸಂಭ್ರಮ

ಅರಸೀಕೆರೆ: ಪಂಚರಾಜ್ಯಗಳ ಚುನಾವಣಾ ಫಲಿತಾಂಶದಲ್ಲಿ ಭಾರತೀಯ ಜನತಾ ಪಾರ್ಟಿ ಗಮನಾರ್ಹ ಸಾಧನೆ ಮಾಡಿರುವ ಹಿನ್ನೆಲೆಯಲ್ಲಿ ಅರಸೀಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರು ಭರ್ಜರಿ ಸಂಭ್ರಮಾಚರಣೆ ನಡೆಸಿದರು. ನಗರದಲ್ಲಿ ನಡೆದ ಸಂಭ್ರಮಾಚರಣೆಯಲ್ಲಿ ಬಿಜೆಪಿ ಪರಾಜಿತ ಅಭ್ಯರ್ಥಿ ಜಿ.ವಿ.ಟಿ. ಬಸವರಾಜು ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸಂಘಟಿತ ನಾಯಕತ್ವ ಹಾಗೂ ಕಾರ್ಯತಂತ್ರದ ಫಲವಾಗಿ ಹಲವು ರಾಜ್ಯಗಳಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿದೆ ಎಂದು ಹೇಳಿದರು. ಈ ಜಯ ಪಕ್ಷದ ಕಾರ್ಯಕರ್ತರ ಪರಿಶ್ರಮ ಮತ್ತು ಜನರ ವಿಶ್ವಾಸದ ಪ್ರತಿಫಲ ಎಂದು ಅವರು ಅಭಿಪ್ರಾಯಪಟ್ಟರು. ಮುಂದಿನ ದಿನಗಳಲ್ಲಿ ಇದೇಉತ್ಸಾಹವನ್ನುಮುಂದುವರೆಸಿಕರ್ನಾಟಕದಲ್ಲೂ ಬಿಜೆಪಿ ಅಧಿಕಾರಕ್ಕೆ ತರಲು ಕಾರ್ಯಕರ್ತರು ಸಂಘಟಿತವಾಗಿ ಶ್ರಮಿಸಬೇಕೆಂದು ಕರೆ ನೀಡಿದರು. ಗ್ರಾಮಾಂತರ ಮಂಡಲ ಅಧ್ಯಕ್ಷ ಯತೀಶ್ ಕುಮಾರ್ ಮಾತನಾಡಿ, ಪಂಚರಾಜ್ಯಗಳ ಫಲಿತಾಂಶ ಪಕ್ಷಕ್ಕೆ ಹೊಸ ಉತ್ಸಾಹ ತುಂಬಿದ್ದು, ರಾಜ್ಯದಲ್ಲಿಯೂ ಅದೇ ರೀತಿಯ ಸಾಧನೆ ಮಾಡಲು ಕಾರ್ಯಕರ್ತರು ಸಜ್ಜಾಗಬೇಕೆಂದು ಹೇಳಿದರು.



ಚನ್ನರಾಯಪಟ್ಟಣ ತಾಲೂಕಿನ ನುಗ್ಗೇಹಳ್ಳಿ ಹೋಬಳಿಯ ತಗಡೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಟಿ. ರಂಗಾಪುರ ಗ್ರಾಮದ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಹಿರೇಗೌಡ ಮಂಗಳವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಅವರನ್ನು ಬೆಂಬಲಿಗರು ಅಭಿನಂದಿಸಿದರು.



ಪಂಚರಾಜ್ಯಗಳ ಚುನಾವಣಾ ಫಲಿತಾಂಶದಲ್ಲಿ ಬಿಜೆಪಿ ಗಮನಾರ್ಹ ಸಾಧನೆ ಮಾಡಿರುವ ಹಿನ್ನೆಲೆಯಲ್ಲಿ ಅರಸೀಕೆರೆಯಲ್ಲಿ ಬಿಜೆಪಿ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು. ನಗರ ಮಂಡಲ ಅಧ್ಯಕ್ಷ ಅವಿನಾಶ್ ನಾಯ್ಡು, ಜಿಲ್ಲಾ ಉಪಾಧ್ಯಕ್ಷ ಗಂಗಾಧರ್, ಪುರುಷೋತ್ತಮ್, ಸಿಂಧು ಅರುಣ್ ಇತರರಿದ್ದರು.

ಸುದ್ದಿ ಸಿಂಚನ

ಎಲೆಕ್ಟ್ರಿಕ್ ಸ್ಕೂಟರ್‌ಗೆ ಬೆಂಕಿ



ಬೇಲೂರು: ಪಟ್ಟಣದ ಲಕ್ಷ್ಮೀಪುರ ಬಡಾವಣೆಯಲ್ಲಿ ತಡರಾತ್ರಿ ಎಲೆಕ್ಟ್ರಿಕ್ ಸ್ಕೂಟರ್‌ಗೆ ಬೆಂಕಿಹತ್ತಿ ಸಂಪೂರ್ಣ ಭಸ್ಮವಾಗಿದ್ದು ಸ್ಥಳೀಯರ ಮುಂಜಾಗ್ರತೆಯಿಂದ ದೊಡ್ಡ ಅನಾಹುತ ತಪ್ಪಿದಂತಾಗಿದೆ. ಸಿ.ಕೆ.ಕೇಶವ ಅವರಿಗೆ ಸೇರಿದ ಗ್ರೀನ್ ಸಿಟಿ ಎಕೋ ಮೋಟಾರ್ಸ್ ಅವರಿಗೆ ಸೇರಿದ ಕಂಪನಿ ಎಲೆಕ್ಟ್ರಿಕ್ ಸ್ಕೂಟಿಯನ್ನು ಸ್ನೇಹಿತರ ಮನೆ ಮುಂಭಾಗ ನಿಲ್ಲಿಸಿದ್ದರು. ಸೋಮವಾರ ರಾತ್ರಿ ಸರಿಸುಮಾರು 11:30 ಗಂಟೆಯ ವೇಳೆಗೆ ಮನೆಯ ಮುಂದೆ ನಿಲ್ಲಿಸಲಾಗಿದ್ದ ಎಲೆಕ್ಟ್ರಿಕ್ ಸ್ಕೂಟರ್‌ಏಕಾಏಕಿ ಬೆಂಕಿಗೆ ಆಹುತಿಯಾಗಿದೆ. ಬೆಂಕಿ ಕಾಣಿಸಿಕೊಂಡ ತಕ್ಷಣ ಅಕ್ಕಪಕ್ಕದ ನಿವಾಸಿಗಳು ಎಚ್ಚರಗೊಂಡು ತಕ್ಷಣವೇ ಸ್ಥಳಕ್ಕೆ ಧಾವಿಸಿ ನೀರು ಹಾಗೂ ಇತರೆ ಉಪಕರಣಗಳ ಸಹಾಯದಿಂದ ಬೆಂಕಿಯನ್ನು ನಂದಿಸಲು ಮುಂದಾದರು. ಅವರ ತ್ವರಿತ ಕ್ರಮದಿಂದ ಬೆಂಕಿ ವ್ಯಾಪಿಸದೇ ನಿಯಂತ್ರಣಕ್ಕೆ ಬಂದಿದ್ದು, ಸಮೀಪದ ಮನೆಗಳಿಗೆ ಯಾವುದೇ ಹಾನಿಯಾಗದೇ ದೊಡ್ಡ ಅನಾಹುತ ತಪ್ಪಿದೆ. ಘಟನೆಯಿಂದ ಸ್ಕೂಟರ್ ಸಂಪೂರ್ಣವಾಗಿ ಸುಟ್ಟುಹೋಗಿದ್ದು, ಬೆಂಕಿ ಕಾಣಿಸಿಕೊಂಡ ಕಾರಣ ಸ್ಪಷ್ಟವಾಗಿಲ್ಲ. ಪ್ರಾಥಮಿಕವಾಗಿ ಬ್ಯಾಟರಿ ತೊಂದರೆ ಕಾರಣವಾಗಿರಬಹುದೆಂದು ಶಂಕಿಸಲಾಗಿದೆ. ಘಟನೆ ಕುರಿತು ಹೆಚ್ಚಿನ ಮಾಹಿತಿ ತಿಳಿದುಬಂದಿಲ್ಲ.

ತಗಡೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಹಿರೇಗೌಡ ಅಧ್ಯಕ್ಷ

ನುಗ್ಗೇಹಳ್ಳಿ: ಹೋಬಳಿಯ ತಗಡೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಟಿ. ರಂಗಾಪುರ ಗ್ರಾಮದ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಹಿರೇಗೌಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಮಂಜುಳಮ್ಮ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಈರೇಗೌಡ ಅವರನ್ನು ಹೊರತುಪಡಿಸಿ ಬೇರಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣಾ ಅಧಿಕಾರಿ ವಿಜಯ ಕುಮಾರ್ ಅವಿರೋಧ ಆಯ್ಕೆ ಘೋಷಿಸಿದರು. ನೂತನ ಅಧ್ಯಕ್ಷ ಈರೇಗೌಡ ಮಾತನಾಡಿ ಪಹಣಿ ಹೊಂದಿರುವ ಈ ಭಾಗದ ರೈತರು ಹಾಗೂ ಶ್ರೀ ಶಕ್ತಿ ಸಂಘಗಳಿಗೆ ಶಾಸಕ ಸಿ.ಎನ್. ಬಾಲಕೃಷ್ಣ ಅವರ ಸಹಕಾರದಿಂದ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ತಾಲೂಕು ಪಂಚಾಯತಿ ಮಾಜಿ ಸದಸ್ಯ ಎನ್. ಬಸವರಾಜ್, ಕಾರ್ಯನಿರ್ವಹಣಾ ಅಧಿಕಾರಿ ಗಿರೀಶ್, ಉಪಾಧ್ಯಕ್ಷ ಪ್ರತೀಪ್, ಬೋರ್ವೆಲ್ ಗಿರೀಶ್, ಗ್ರಾಮ ಪಂಚಾಯಿತಿ ಅಧ್ಯಕ್ಷರುಗಳಾದ ಮಹಾಲಿಂಗೇಗೌಡ, ಎಲ್ಐಸಿ ಪುಟ್ಟರಾಜು, ಕಾಮನಾಯಕನಹಳ್ಳಿ, ನಾಗೇಶ್, ಟಿ.ವಿ. ಬಸವರಾಜು, ಕೆ.ಪಿ. ಕುಮಾರ್, ಡೇರಿ ಸ್ವಾಮಿ, ಹೊನ್ನೇನಹಳ್ಳಿ ಸ್ವಾಮಿ, ತಮ್ಮಯ್ಯ (ರಂಗಸ್ವಾಮಿ) ಉಮೇಶ್, ರಾಜು, ಎಲ್. ಬಿ. ಕಾಂತರಾಜು, ಚಂದ್ರಶೇಖರ್, ನಾಗೇಶ್, ತಿಲಾಂಜಲಿ, ಪ್ರಶಾಂತ್, ಶಂಕ್ರಪ್ಪ, ಸಂದೀಪ್, ಇತರರು ಹಾಜರಿದ್ದರು.

ಪೇಪರ್‌ಲೆಸ್ ನೋಂದಣಿ ವ್ಯವಸ್ಥೆ ವಿರುದ್ಧ ಆಕ್ರೋಶ

ಸಾರ್ವಜನಿಕರಿಗೆ ತೊಂದರೆಗಳ ಸರಣಿ ನಿವಾರಿಸದಿದ್ರೆ, ಸಭೆ ಸೇರಿ ಹೋರಾಟದ ನಿರ್ಧಾರ: ಜಿಲ್ಲಾ ಪತ್ರಬರಹಗಾರ ಜಿ. ಕೃಷ್ಣ ಎಚ್ಚರಿಕೆ

• **ಕನ್ನಡಪ್ರಭ ವಾರ್ತೆ** ಹಾಸನ

ರಾಜ್ಯ ಸರ್ಕಾರ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಮೂಲಕ ಜಾರಿಗೆ ತರಲು ಮುಂದಾಗಿರುವ ಕಾವೇರಿ ಪೇಪರ್‌ಲೆಸ್ ನೋಂದಣಿ ವ್ಯವಸ್ಥೆ ಸಾರ್ವಜನಿಕರಿಗೆ ಅನೇಕ ತೊಂದರೆಗಳನ್ನು ಉಂಟುಮಾಡುತ್ತಿದೆ ಎಂದು ಹಾಸನ ಜಿಲ್ಲಾ ಪತ್ರಬರಹಗಾರರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಚಾಮರಾಜನಗರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಆರಂಭಿಸಿರುವ ಈ ವ್ಯವಸ್ಥೆಯ ಲೋಪದೋಷಗಳನ್ನು ಸರಿಪಡಿಸದೇ ರಾಜ್ಯದಾದ್ಯಂತಜಾರಿಗೆತರಲುಮುಂದಾಗಿರುವುದು ಸರಿಯಲ್ಲ, ನಮ್ಮ ಬೇಡಿಕೆಗೆ ಸ್ಪಂದಿಸದಿದ್ದರೇ ಸಭೆ ಸೇರಿ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ಮಾಡಲು ಮುಂದಾಗುತ್ತೇವೆ ಎಂದು ಜಿಲ್ಲಾ ಪತ್ರ ಬರಹಗಾರರ ವೇದಿಕೆಯ ಜಿ. ಕೃಷ್ಣ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಪತ್ರಬರಹಗಾರರ ಪ್ರಕಾರ, ಈ ಪೇಪರ್‌ಲೆಸ್ ವ್ಯವಸ್ಥೆಯಲ್ಲಿ ಆಸ್ತಿ ನೋಂದಣಿ ಬಳಿಕ ಖರೀದಿದಾರರಿಗೆ ಯಾವುದೇ ಭೌತಿಕ ದಾಖಲೆ ಸಿಗುವುದಿಲ್ಲ. ಎಲ್ಲಾ ದಾಖಲೆಗಳು ಡಿಜಿಟಲ್ ಲಾಕರ್‌ನಲ್ಲಿ ಮಾತ್ರ ಉಳಿಯುವುದರಿಂದ ಭದ್ರತೆ ಕುರಿತು ಆತಂಕ ಹೆಚ್ಚಾಗಿದೆ. ಪಾಸ್‌ವರ್ಡ್ ಮರೆತರೆ ಅಥವಾ ತಾಂತ್ರಿಕ ಸಮಸ್ಯೆ ಉಂಟಾದರೆ ತಮ್ಮ ಆಸ್ತಿ ದಾಖಲೆಗಳನ್ನೇ ಪಡೆಯಲು ಸಾಧ್ಯವಿಲ್ಲ ಎಂಬ ಭೀತಿ ವ್ಯಕ್ತವಾಗಿದೆ. ಇನ್ನೂ ಆನ್‌ಲೈನ್ ಮೂಲಕ ಮುದ್ರಾಂಕ ಹಾಗೂ ನೋಂದಣಿ ಶುಲ್ಕ ಪಾವತಿ ಮಾಡಿದ ಬಳಿಕ ಯಾವುದಾದರೂ ಕಾರಣಕ್ಕೆ ನೋಂದಣಿ ಆಗದಿದ್ದರೆ ಹಣ ತಿರುಗಿಸಿಕೊಳ್ಳಲು ವ್ಯವಸ್ಥೆ ಇಲ್ಲ. ಇದರ ಜೊತೆಗೆ ಹೆಚ್ಚುವರಿ ಸೇವಾ ಶುಲ್ಕ ವಿಧಿಸಲಾಗುತ್ತಿದ್ದು, ಸಾರ್ವಜನಿಕರಿಗೆ ಆರ್ಥಿಕ ಭಾರ ಹೆಚ್ಚುತ್ತಿದೆ ಎಂದರು.



ರಾಜ್ಯ ಸರ್ಕಾರ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಮೂಲಕ ಜಾರಿಗೆ ತರಲು ಮುಂದಾಗಿರುವ ಕಾವೇರಿ ಪೇಪರ್‌ಲೆಸ್ ನೋಂದಣಿ ವ್ಯವಸ್ಥೆ ಸಾರ್ವಜನಿಕರಿಗೆ ಅನೇಕ ತೊಂದರೆಗಳನ್ನು ಉಂಟುಮಾಡುತ್ತಿದೆ ಎಂದು ಹಾಸನ ಜಿಲ್ಲಾ ಪತ್ರಬರಹಗಾರರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಇ-ಸಹಿ ವ್ಯವಸ್ಥೆ ಕೂಡ ಮತ್ತೊಂದು ದೊಡ್ಡ ಸಮಸ್ಯೆಯಾಗಿದ್ದು, ಹಿರಿಯ ನಾಗರಿಕರು, ರೈತಾಪಿ ವರ್ಗ ಹಾಗೂ ತಾಂತ್ರಿಕ ಅರಿವು ಇಲ್ಲದವರು ಮೋಸಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚಿದೆ. ಭೌತಿಕ ಸಹಿ ಇಲ್ಲದೇ ನೋಂದಣಿ ನಡೆಯುವುದರಿಂದ ದಸ್ತಾವೇಜುಗಳ ಪ್ರಾಮಾಣಿಕತೆ ಪ್ರಶ್ನೆಗೆ ಒಳಗಾಗುತ್ತದೆ. ಹ್ಯಾಕರ್‌ಗಳ ದಾಳಿ ಹಾಗೂ ಒಟಿಪಿ ಮೋಸಗಳ ಹಿನ್ನೆಲೆ ಡಿಜಿಟಲ್ ವ್ಯವಸ್ಥೆಯ ಮೇಲೆ ಜನರಲ್ಲಿ ಅಪನಂಬಿಕೆ ಹೆಚ್ಚುತ್ತಿದೆ ಎಂದು ದೂರಿದರು.

ಮತ್ತೊಂದು ಪ್ರಮುಖ ಸಮಸ್ಯೆಯಾಗಿ, ಸಾಕ್ಷಿದಾರರ ಹಾಜರಾತಿ ಕುರಿತ ಗೊಂದಲ ಉಂಟಾಗಿದೆ. ಆನ್‌ಲೈನ್‌ನಲ್ಲಿ ದಾಖಲೆ ಅಪ್‌ಲೋಡ್ ಮಾಡುವಾಗ ಸಾಕ್ಷಿದಾರರ ವಿವರಗಳನ್ನು ನೀಡಿದರೂ, ನೋಂದಣಿ ಸಮಯದಲ್ಲಿ ಅವರು ಹಾಜರಾಗದಿದ್ದರೆ ಪ್ರಕ್ರಿಯೆ ಮುಂದೂಡಬೇಕಾಗುತ್ತದೆ. ಇದರಿಂದ ಸಾರ್ವಜನಿಕರಿಗೆ ಸಮಯ ಹಾಗೂ ಹಣದ ನಷ್ಟ ಉಂಟಾಗುತ್ತಿದೆ. ಬ್ಯಾಂಕ್ ಸಾಲ ಪಡೆಯಲು ಮೂಲಪತ್ರಗಳ ಅವಶ್ಯಕತೆ ಇರುವ ಸಂದರ್ಭದಲ್ಲಿ, ಭೌತಿಕ ದಾಖಲೆಗಳಿಲ್ಲದಿರುವುದು ಮತ್ತಷ್ಟು ತೊಂದರೆ ತರಲಿದೆ. ವಿಲ್ ಪ್ರಕ್ರಿಯೆಗಳಲ್ಲಿ ಗುಪ್ತತೆಯ ಕೊರತೆ, ವಾರಸುದಾರರಿಗೆ ಮಾಹಿತಿ ತಲುಪದಿರುವ ಸಾಧ್ಯತೆಗಳಿವೆ. ಪತ್ರಬರಹಗಾರರ ಅಭಿಪ್ರಾಯದಲ್ಲಿ, ಈ ವ್ಯವಸ್ಥೆ ಭೂಮಾಫಿಯಾ ಹಾಗೂ ಅಕ್ರಮ ಚಟುವಟಿಕೆಗಳಿಗೆ ಅವಕಾಶ ಕಲ್ಪಿಸುವ ಸಾಧ್ಯತೆ ಇದೆ. ದಸ್ತಾವೇಜು ತಯಾರಿಸಿದವರು ಅಥವಾ ನೋಂದಣಿ ಪ್ರಕ್ರಿಯೆಯಲ್ಲಿ ಭಾಗಿಯಾದವರು ಯಾರಿದ್ದಾರೆ ಎಂಬುದು ಸ್ಪಷ್ಟವಾಗದಿರುವುದು ಕಾನೂನು ತನಿಖೆಗಳಿಗೆ ಅಡ್ಡಿಯಾಗಬಹುದು ಎಂದು ಅವರು ತಿಳಿಸಿದರು.

ಇದಲ್ಲದೆ, ಈ ಹೊಸ ವ್ಯವಸ್ಥೆಯಿಂದ ರಾಜ್ಯದ ಲಕ್ಷಾಂತರ ಪರವಾನಗಿ ಪಡೆದ ಪತ್ರಬರಹಗಾರರ ಜೀವನೋಪಾಯಕ್ಕೂ ಹೊಡೆತ ಬೀಳಲಿದೆ. ವರ್ಷಗಳಿಂದ ಈ ವೃತ್ತಿ ಅವಲಂಬಿಸಿಕೊಂಡು ಬದುಕುತ್ತಿರುವ ಕುಟುಂಬಗಳು ಸಂಕಷ್ಟಕ್ಕೆ ಸಿಲುಕುವ ಭೀತಿ ವ್ಯಕ್ತವಾಗಿದೆ. ಸರ್ಕಾರವು ಈ ವ್ಯವಸ್ಥೆಯನ್ನು ಜಾರಿಗೆ ತರುವ ಮೊದಲು ಜನಸಾಮಾನ್ಯರಿಗೆ ಸಮರ್ಪಕ ಮಾಹಿತಿ ನೀಡದೆ, ಜನಾಭಿಪ್ರಾಯ ಪಡೆಯದೆ ತುರ್ತಾಗಿ ಜಾರಿಗೆ ತಂದಿರುವುದು ವಿಷಾದನೀಯ ಎಂದು ಅವರು ತಿಳಿಸಿದರು.

ಆದ್ದರಿಂದ, ಪೇಪರ್‌ಲೆಸ್ ನೋಂದಣಿ ವ್ಯವಸ್ಥೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ, ಲೋಪದೋಷ ಗಳನ್ನು ಸರಿಪಡಿಸಿ, ಭೌತಿಕ ದಾಖಲೆಗಳನ್ನು ಕಡ್ಡಾಯವಾಗಿ ನೀಡುವ ವ್ಯವಸ್ಥೆ ಮಾಡಬೇಕು. ಜೊತೆಗೆ ಪತ್ರಬರಹಗಾರರಿಗೆ ಪ್ರತ್ಯೇಕ ಲಾಗಿನ್, ಗುರುತಿನ ಚೀಟಿ ಹಾಗೂ ಡಿಜಿಟಲ್ ಸಹಿಗೆ ಅವಕಾಶ ಕಲ್ಪಿಸಬೇಕು ಎಂದು ಹಾಸನ ಜಿಲ್ಲಾ ಪತ್ರಬರಹಗಾರರು ಸರ್ಕಾರವನ್ನು ಆಗ್ರಹಿಸಿದರು.

ಇನ್ನೂ ಸರಕಾರವು ನಮ್ಮ ಬೇಡಿಕೆಗೆ ಸ್ಪಂದಿಸದಿದ್ದರೇ ಫ್ರೀಡಂ ಪಾರ್ಕಿನಲ್ಲಿ ಸತ್ಯಗ್ರಹ ಮಾಡಲು ಒಕ್ಕೂಟದ ಸಭೆಯಲ್ಲಿ ತೀರ್ಮಾನಿಸಲಾಗುವುದು ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹಾಸನ ಜಿಲ್ಲಾ ಪತ್ರ ಬರಹಗಾರರಾದ ಎ.ಕೆ. ತುಳಸಿದಾಸ್, ಎಚ್. ಕೆ. ಜಯರಾಮ್, ಸತೀಶ್ ಇತರರು ಉಪಸ್ಥಿತರಿದ್ದರು.


ವಿದ್ಯುತ್ ಸಮಸ್ಯೆ: ರೈತ ಸಂಘಟನೆಗಳ ಪ್ರತಿಭಟನೆ

ರೈತರ ಸಮಸ್ಯೆ ಆಲಿಸಿದ ಆಲೂರು ಸೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ರವಿ

• **ಕನ್ನಡಪ್ರಭ ವಾರ್ತೆ** ಆಲೂರು

ತಾಲೂಕಿನಾದ್ಯಂತ ರೈತರ ಕೊಳವೆ ಬಾವಿಗಳಿಗೆ ನೀಡಬೇಕಾದ 7 ಗಂಟೆ ವಿದ್ಯುತ್ ಅನ್ನು ಸಮರ್ಪಕವಾಗಿ ನೀಡದೆ ನಿರಂತರ ವಿದ್ಯುತ್ ಕಡಿತಗೊಳ್ಳುತ್ತಿರುವುದರಿಂದ ರೈತರು ತುಂಬ ತೊಂದರೆ ಅನುಭವಿಸುತ್ತಿದ್ದು, ವಿದ್ಯುತ್ ಅಭಾವದಿಂದ ರೈತರು ಬೆಳೆದ ಬೆಳೆಯು ಒಣಗಿಹೋಗಿದೆ ಎಂದು ಆರೋಪಿಸಿ ರೈತರನ್ನು ಒಳಗೊಂಡಂತೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಆಲೂರು ಘಟಕದ ವತಿಯಿಂದ ಆಲೂರು ಸೆಸ್ಕ್ ಕಚೇರಿ ಬಳಿ ಎಂಜಿನಿಯರ್ ಹಾಗೂ ಸಿಬ್ಬಂದಿ ವಿರುದ್ಧ ಪ್ರತಿಭಟನೆ ನಡೆಸಿದರು.

ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಎಚ್ ಬಿ ಧರ್ಮರಾಜು ಮಾತನಾಡಿ ಕೆಲವು ಅಧಿಕಾರಿಗಳ ಬೇಜವಾಬ್ದಾರಿತನದಿಂದ ಈ ಭಾಗದಲ್ಲಿ ಹಲವು ದಿನಗಳಿಂದ ವಿದ್ಯುತ್ ಸಮಸ್ಯೆ ಎದುರಾಗಿದೆ ಸರ್ಕಾರವು ರೈತರ ಬೋರ್‌ವೆಲ್‌ಗಳಿಗೆ ದಿನನಿತ್ಯ 7 ಗಂಟೆಗಳ ಕಾಲ ನಿರಂತರ ವಿದ್ಯುತ್ತನ್ನು ನೀಡಬೇಕು ಎಂದು ಆದೇಶ ಮಾಡಿದ್ದರೂ ಕೂಡ ಇಲಾಖೆಯ ಅಧಿಕಾರಿಗಳ ಬೇಜವಾಬ್ದಾರಿತನದಿಂದ ಪ್ರತಿದಿನ ಸರಿಯಾಗಿ ಎರಡರಿಂದ ಮೂರು ಗಂಟೆಗಳ ಕಾಲವೂ ಕೂಡ ವಿದ್ಯುತ್ ರೈತರಿಗೆ ಸರಬರಾಜು ಆಗುತ್ತಿಲ್ಲ. ವಿದ್ಯುತ್ತನ್ನು ನಂಬಿ ಕೊಳವೆಬಾವಿಗಳನ್ನು ಹೊಂದಿರುವ ರೈತರು ಬೇಸಿಗೆಕಾಲದಲ್ಲಿ ವಿವಿಧ ರೀತಿಯ ಬೆಳೆಗಳನ್ನು ಬೆಳೆದಿದ್ದರು ಆದರೆ ವಿದ್ಯುತ್ ಸರಬರಾಜು ಸರಿಯಾಗಿ ಆಗದೆ ಬೆಳೆದ ಬೆಳೆಯು ಸಂಪೂರ್ಣವಾಗಿ ಒಣಗಿದ್ದು ರೈತರನ್ನು ಸಾಲದ ಸುಳಿಗೆ ತಳ್ಳುವಂತೆ ಮಾಡಿದೆ ಈ ವಿಷಯವನ್ನು ಇಲಾಖೆಯ ಮೇಲಧಿಕಾರಿಗಳಿಗೆ ತಿಳಿಸಿದರು ಕೂಡ ಸಮಸ್ಯೆಗೆ ಇಲ್ಲಿಯವರೆಗೆ ಯಾವುದೇ ರೀತಿಯಾದ ಪರಿಹಾರವೂ ಕೂಡ ದೊರೆತಿಲ್ಲ. ಪ್ರಸ್ತುತ ವರ್ಷ ರೈತರು ಬೆಳೆದ ಯಾವುದೇ ಬೆಳೆಗೆ ಬೆಲೆ ಇಲ್ಲದೆ ಕಂಗಾಲಾಗಿರುವ ರೈತರಿಗೆ ವಿದ್ಯುತ್ ಸಮಸ್ಯೆಯೂ ಕೂಡ ರೈತರ ಜೀವನಕ್ಕೆ ಕೊಡಲಿ ಪೆಟ್ಟನ್ನು ಕೊಟ್ಟಂತಾಗಿದೆ. ಆದುದರಿಂದ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ತಕ್ಷಣ ಕಾರ್ಯ ಪ್ರವೃತ್ತರಾಗಿ ತಾಲೂಕಿ ನಲ್ಲಿ ಆಗುತ್ತಿರುವ ವಿದ್ಯುತ್ ಸಮಸ್ಯೆಗೆ ಶೀಘ್ರ ಪರಿಹಾರವನ್ನು ಕಲ್ಪಿಸುವಂತೆ ಒತ್ತಾಯಿಸಿದರು.



ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಆಲೂರು ಘಟಕದ ವತಿಯಿಂದ ಆಲೂರು ಸೆಸ್ಕ್ ಕಚೇರಿ ಬಳಿ ಎಂಜಿನಿಯರ್ ಹಾಗೂ ಸಿಬ್ಬಂದಿ ವಿರುದ್ಧ ಪ್ರತಿಭಟನೆ ನಡೆಸಲಾಯಿತು.

■ 7 ಗಂಟೆಗಳ ಕಾಲ ನಿರಂತರ ವಿದ್ಯುತ್ತನ್ನು ನೀಡಬೇಕು ಎಂದು ಆದೇಶ ಮಾಡಿದ್ದರೂ ಕೂಡ ಪ್ರತಿದಿನ ಮೂರು ಗಂಟೆಗಳ ಕಾಲವೂ ಕೂಡ ಆಗುತ್ತಿಲ್ಲ ಎಂಬ ಆರೋಪ

ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಶಾಸಕ ಸಿಮೆಂಟ್ ಮಂಜು ವಿದ್ಯುತ್ ಸಮಸ್ಯೆಯ ಕುರಿತಾಗಿ ನಾಳೆ ವಿದ್ಯುತ್ ಇಲಾಖೆಯ ಅಧಿಕಾರಿಗಳ ಸಭೆ ನಡೆಸಿ ಸಮರ್ಪಕ ವಿದ್ಯುತ್ ಪೂರೈಕೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದರಿಂದ ಪ್ರತಿಭಟನಾಕರರು ಪ್ರತಿಭಟನೆ ಹಿಂಪಡೆದರು. ಆಲೂರು ಸೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ರವಿ ಸ್ಥಳಕ್ಕೆ ಭೇಟಿ ನೀಡಿ ಪ್ರತಿಭಟನಾಕಾರರನ್ನು ಮನವೊಲಿಸಿ ವಿದ್ಯುತ್ ಸಮಸ್ಯೆ ಬಗ್ಗೆ ಹಾಗೂ ಸರಿಯಾಗಿ ಕರ್ತವ್ಯ ನಿರ್ವಹಿಸದ ಸಿಬ್ಬಂದಿಯ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಎಚ್. ಬಿ ಧರ್ಮರಾಜು, ಉಪಾಧ್ಯಕ್ಷ ನಾಗೇಶ್, ರೈತ ಸಂಘಟನೆಗಳ ಮುಖಂಡರಾದ ಕೃಷ್ಣಮೂರ್ತಿ, ಜಯಣ್ಣ, ಮಲ್ಲೇಶ್, ಯೋಗೇಶ್, ಮಂಜುನಾಥ್, ತೀರ್ಥಪ್ರಸಾದ್, ವಿಶ್ವ ಸೇರಿದಂತೆ ಹಲವಾರು ರೈತ ಮುಖಂಡರು, ರೈತರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಅಗ್ನಿಶಾಮಕ ಠಾಣೆಗೆ ನೂತನ ವಾಹನ

ಚನ್ನರಾಯಪಟ್ಟಣ: ಪಟ್ಟಣದ ಅಗ್ನಿಶಾಮಕ ಠಾಣೆಗೆ ವಾಹನವನ್ನು ಸರ್ಕಾರ ನೀಡಿದ್ದು ಶಾಸಕ ಸಿ.ಎನ್. ಬಾಲಕೃಷ್ಣ ಅವರು ಪೂಜೆ ಸಲ್ಲಿಸಿ ಚಾಲನೆ ನೀಡಿದ್ದಾರೆ. ನಂತರ ಮಾತನಾಡಿದ ಶಾಸಕರು, ತಾಲೂಕಿಗೆ ಅಗತ್ಯವಾಗಿದ್ದ ಅಗ್ನಿಶಾಮಕ ವಾಹನ ನೀಡಲು ಸಚಿವರಲ್ಲಿ ಮನವಿ ಮಾಡಿದ್ದರ ಹಿನ್ನೆಲೆಯಲ್ಲಿ ಚನ್ನರಾಯಪಟ್ಟಣಕ್ಕೆ ವಾಹನ ನೀಡಲಾಗಿದೆ. ಪಟ್ಟಣಕ್ಕೆ ತುರ್ತು ಸೇವೆಗಾಗಿ ವಾಹನ ಅಗತ್ಯವಿತ್ತು. ತಾಲೂಕಿನಲ್ಲಿ 60ಕ್ಕೂ ಹೆಚ್ಚು ಅಗ್ನಿ ಅವಘಡಗಳು ಕಳೆದ ವರ್ಷ ನಡೆದಿದ್ದು, ಹೊರ ತಾಲೂಕಿನಿಂದ ಅಗ್ನಿಶಾಮಕ ವಾಹನವನ್ನು ಕರೆಸಬೇಕಾ ಗಿತ್ತು. ಇದೀಗ ಹೈಟೆಕ್ ವಾಹನವನ್ನು ಸರ್ಕಾರ ನೀಡಿದ್ದು, ಸಾರ್ವಜನಿಕರ ತುರ್ತು ಸೇವೆಗೆ ಲಭ್ಯವಿದೆ. ಅಗ್ನಿಶಾಮಕ ಠಾಣೆಗೆ ಸಿಬ್ಬಂದಿ ಕೊರತೆಯಾಗಬಾರದು, ಸರ್ಕಾರ ಯೂನಿಟ್‌ನಲ್ಲಿ ಸಿಬ್ಬಂದಿಯನ್ನು ನೇಮಕ ಮಾಡಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಅಗ್ನಿಶಾಮಕ ಠಾಣಾಧಿಕಾರಿ ಪುಟ್ಟಸ್ವಾಮಿ, ಪುರಸಭೆ ಮುಖ್ಯ ಅಧಿಕಾರಿ ಯತೀಶ್ ಕುಮಾರ್, ಟಿಎಪಿಸಿ ಎಮ್.ಎಸ್. ಮಾಜಿ ಅಧ್ಯಕ್ಷ ಎಂ. ಆರ್. ಅನಿಲ್, ಅಗ್ನಿಶಾಮಕ ಠಾಣೆಯ ಸಿಬ್ಬಂದಿ ಹಾಜರಿದ್ದರು.

ಸ್ಕಾಲರ್ಸ್ ಶಾಲೆಯಲ್ಲಿ ಸಾಧಕ ವಿದ್ಯಾರ್ಥಿಗಳು, ಪೋಷಕರಿಗೆ ಸನ್ಮಾನ

ಐಸಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ಶೇ. 100 ಫಲಿತಾಂಶ



ಐಸಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ಶೇಕಡಾ 100 ಫಲಿತಾಂಶ ದಾಖಲಿಸಿರುವ ಶಾಲೆಯು, ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಹಾಗೂ ಅವರ ಸಾಧನೆಗೆ ಬೆನ್ನೆಲುಬಾದ ಪೋಷಕರನ್ನು ಸನ್ಮಾನಿಸಿ ಗೌರವಿಸಿತು.

• **ಕನ್ನಡಪ್ರಭ ವಾರ್ತೆ** ಹಾಸನ

ನಗರದ ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ವಿದ್ಯಾರ್ಥಿಗಳ ಸಾಧನೆಗೆ ಪೋಷಕರನ್ನು ಸನ್ಮಾನಿಸಿದ ವಿಶೇಷ ಕಾರ್ಯಕ್ರಮ ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿಯಾಯಿತು.

ಐ.ಸಿ.ಎಸ್.ಇ 10ನೇ ತರಗತಿ ಪರೀಕ್ಷೆಗಳಲ್ಲಿ ಶೇಕಡಾ 100 ಫಲಿತಾಂಶ ದಾಖಲಿಸಿರುವ ಶಾಲೆಯು, ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಹಾಗೂ ಅವರ ಸಾಧನೆಗೆ ಬೆನ್ನೆಲುಬಾದ ಪೋಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದ ವಿಶೇಷತೆ ಎಂದರೆ, ತಮ್ಮ ಯಶಸ್ಸಿಗೆ ಕಾರಣರಾದ ಪೋಷಕರನ್ನು ವಿದ್ಯಾರ್ಥಿಗಳೇ ಸ್ವತಃ ಸನ್ಮಾನಿಸಿದ ಕ್ಷಣ. ಈ ವೇಳೆ ಅನೇಕ ಪೋಷಕರ ಕಣ್ಣಲ್ಲಿ ಸಂತಸದ ಕಣ್ಣೀರು ಮಿನುಗಿದ್ದು, ತಮ್ಮ ಮಕ್ಕಳಿಗಾಗಿ ಪಟ್ಟ ಪರಿಶ್ರಮ ಫಲಿಸಿದ ತೃಪ್ತಿ ಸ್ಪಷ್ಟವಾಗಿ ಗೋಚರಿಸಿತು. ನಾವು ಆಯ್ಕೆ ಮಾಡಿದ ಶಾಲೆಯೇ ನಮ್ಮ ಕನಸನ್ನು ನನಸು ಮಾಡಿದೆ ಎಂಬ ಭಾವನೆ ಪೋಷಕರ ಮಾತುಗಳಲ್ಲಿ ಪ್ರತಿಧ್ವನಿಸಿತು. ಈ ವರ್ಷದ ಫಲಿತಾಂಶದಲ್ಲಿ 97% ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದ ಜನ್ಯ ವೈ.ಬಿ. ಅವರ ಪೋಷಕರು ಮಾತನಾಡಿ, ಮಕ್ಕಳ ಮೇಲೆ ಅನಗತ್ಯ ಒತ್ತಡ ಹೇರುವುದಕ್ಕಿಂತ ಅವರಿಗೆ ಮುಕ್ತ ಹಾಗೂ ಪ್ರೋತ್ಸಾಹದ ವಾತಾವರಣ ಒದಗಿಸಬೇಕು ಎಂದು ಸಲಹೆ ನೀಡಿದರು.

96% ಅಂಕಗಳಿಸಿದ ಡೀವಿತ್ ಡೇವಿಡ್ ಅವರ ಪೋಷಕರು, ಉತ್ತಮ ಫಲಿತಾಂಶಕ್ಕೆ ಶಾಲೆಯ ಆಡಳಿತಾಧಿಕಾರಿಗಳಾದ ಡಾ. ಎಚ್. ಎನ್. ಚಂದ್ರಶೇಖರ್‌ಹಾಗೂ ಶಿಕ್ಷಕ ವೃಂದದ ಸಮರ್ಪಿತ ಸೇವೆಯನ್ನು ಪ್ರಶಂಸಿಸಿದರು. ಇನ್ನೋರ್ವ ಪ್ರತಿಭಾವಂತ ವಿದ್ಯಾರ್ಥಿನಿ ತನ್ವಿಕಾ (96%) ಅವರ ಪೋಷಕರು ಮಾತನಾಡಿ, ಕಳೆದ 13 ವರ್ಷಗಳ ಶಾಲೆ-ಪೋಷಕರ ಸಂಯುಕ್ತ ಶ್ರಮಕ್ಕೆ ಇಂದು ಸಾರ್ಥಕತೆ ದೊರೆತಿದ್ದು, ಈ ಸಂಸ್ಥೆಯೊಂದಿಗೆ ಇರುವ ಬಾಂಧವ್ಯಕ್ಕೆ ನಾವು ಸದಾ ಋಣಿಗಳಾಗಿರುತ್ತೇವೆ ಎಂದು ಕೃತಜ್ಞತೆಯನ್ನು ವ್ಯಕ್ತಪಡಿಸಿದರು.

ಶಾಲೆಯ ಆಡಳಿತಾಧಿಕಾರಿಗಳಾದ ಡಾ. ಎಚ್.ಎನ್. ಚಂದ್ರಶೇಖರ್‌ಅವರು ವಿದ್ಯಾರ್ಥಿಗಳನ್ನು ಅಭಿನಂದಿಸಿ, ಇದು ನಿಮ್ಮ ಸಾಧನೆಯ ಮೊದಲ ಮೆಟ್ಟಿಲು ಮಾತ್ರ. ಮುಂದಿನ ದಿನಗಳಲ್ಲಿ ಇನ್ನಷ್ಟು ಎತ್ತರಗಳನ್ನು ತಲುಪಿ ಜೀವನದಲ್ಲಿ ದೊಡ್ಡ ಸಾಧನೆಗಳನ್ನು ಮಾಡಬೇಕು ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಲಕ್ಷ್ಮೀ ನಾಗರಾಜು, ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಶಿಕ್ಷಕರು, ಪೋಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಅಸಮಾಧಾನ | ಎಂಸಿಇ ಸಂಸ್ಥೆಯ ಅಧ್ಯಕ್ಷ ಆರ್. ಟಿ. ದೇವೇಗೌಡ, ಜಗದೀಶ್ ಚೌಡಹಳ್ಳಿ ಗಂಭೀರ ಆರೋಪ

ತೀರ್ಪು ಪ್ರತಿ ಸಿಗುವ ಮುನ್ನವೇ ಅಧಿಕಾರ ಸ್ವೀಕಾರ ಸರಿಯಲ್ಲ

• **ಕನ್ನಡಪ್ರಭ ವಾರ್ತೆ** ಹಾಸನ

ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಗೆ ಸಂಬಂಧಿಸಿದ ಮಹತ್ವದ ಪ್ರಕರಣದಲ್ಲಿ ಹೈಕೋರ್ಟ್ ತೀರ್ಪು ಪ್ರಕಟಗೊಂಡಿದ್ದರೂ, ನ್ಯಾಯಾಲಯದ ಅಧಿಕೃತ ಆದೇಶ ಪ್ರತಿ ಹೊರಬರುವ ಮುನ್ನವೇ ನಿರ್ದೇಶಕರಾಗಿ ಗುರುದೇವ್ ಹಾಗೂ ಜಿ.ಟಿ. ಕುಮಾರ್ ಅವರ ತಂಡ ಅಧಿಕಾರ ಸ್ವೀಕಾರ ಮಾಡುತ್ತಿರುವುದು ಸಂಪೂರ್ಣ ಕಾನೂನು ಬಾಹಿರ ಕ್ರಮ ಎಂದು ಸಂಸ್ಥೆಯ ಅಧ್ಯಕ್ಷ ಆರ್. ಟಿ. ದೇವೇಗೌಡಮತ್ತು ಕಾರ್ಯದರ್ಶಿ ಸಿ. ಆರ್. ಜಗದೀಶ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ನ್ಯಾಯಾಲಯದ ಆದೇಶವನ್ನು ತಪ್ಪಾಗಿ ಅರ್ಥೈಸಿಕೊಂಡು ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿಸಲಾಗುತ್ತಿದೆ ಎಂದು ಆರೋಪಿಸಿದರು. ಬಿ.ಆರ್. ಗುರುದೇವ್, ಜಿ.ಟಿ. ಕುಮಾರ್‌ಹಾಗೂ ಎಸ್.ಜಿ. ಶ್ರೀಧರ್ ಅವರು ತಾವು ಅಧ್ಯಕ್ಷರು, ಕಾರ್ಯದರ್ಶಿ ಮತ್ತು ಖಜಾಂಚಿ ಎಂದು ಘೋಷಿಸಿಕೊಂಡು ತಕ್ಷಣದಿಂದಲೇ ಅಧಿಕಾರ ಜಾರಿಗೆ ಬಂದಿದೆ ಎಂಬ ಸುಳ್ಳು ವದಂತಿಯನ್ನು ಹರಡಿದ್ದಾರೆ. ಇದರ ಆಧಾರದ ಮೇಲೆ ಯಾವುದೇ ಅಧಿಕೃತ ಆದೇಶವಿಲ್ಲದೆ ತರಾತುರಿಯಲ್ಲಿ ಆಡಳಿತ ಹಿಡಿಯಲು ಮುಂದಾಗಿರುವುದು ಗಂಭೀರ ಕಾನೂನು ಉಲ್ಲಂಘನೆ ಎಂದು ದೂರಿದರು.



ಪತ್ರಿಕಾಗೋಷ್ಠಿಯಲಿ ಎಂಸಿಇ ಆಡಳಿತ ಸಂಸ್ಥೆಯ ಅಧ್ಯಕ್ಷ ಆರ್. ಟಿ. ದೇವೇಗೌಡ, ಕಾರ್ಯದರ್ಶಿ ಜಗದೀಶ್ ಹಾಗೂ ಇತರರು ಮಾತನಾಡಿದರು.

ನ್ಯಾಯಾಲಯದಲ್ಲಿ ವಿಚಾರಣೆ ವೇಳೆ ನಮ್ಮ ಪರ ವಕೀಲರು ಆಡಳಿತ ಮಂಡಳಿಯ ಸ್ಥಿತಿ ಕುರಿತು ಸ್ಪಷ್ಟನೆ ಕೇಳಿದಾಗ, ನ್ಯಾಯಾಧೀಶರು ನನ್ನ ಅಧಿಕೃತ ಆದೇಶಹೊರಬರುವವರೆಗೆ ಆಡಳಿತ ಮಂಡಳಿಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ಇಂತಹ ಸ್ಪಷ್ಟ ಸೂಚನೆ ಇದ್ದರೂ ಅದನ್ನು ನಿರ್ಲಕ್ಷಿಸಿ ಕ್ರಮ ಕೈಗೊಳ್ಳುವುದು ನ್ಯಾಯಾಂಗದ ಗೌರವಕ್ಕೂ ಧಕ್ಕೆ ತರುವಂತಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಇನ್ನೂ, ಗುರುದೇವ್ ಮತ್ತು ಅವರ ತಂಡ ಸಂಸ್ಥೆಯ ವ್ಯಾಪ್ತಿಗೆ ಬರುವ ವಿವಿಧ ಕಾಲೇಜುಗಳಿಗೆ ಭೇಟಿ ನೀಡಿ ತಾವೇ ಅಧಿಕಾರ ವಹಿಸಿಕೊಂಡಿರುವುದಾಗಿ ಹೇಳಿಕೊಂಡು ಪತ್ರಗಳನ್ನು ನೀಡುತ್ತಿರುವುದು ಗಮನಾರ್ಹವಾಗಿದೆ. ಜೊತೆಗೆ ಸಂಸ್ಥೆಯ ಬ್ಯಾಂಕ್ ಖಾತೆಗಳ ಹಣಕಾಸು ವ್ಯವಹಾರಗಳಲ್ಲಿ ಮುಂದಿನಿಂದ ತಮ್ಮ ಸಹಿಯನ್ನೇ ಬಳಸಬೇಕು ಎಂದು ಸೂಚಿಸಿರುವುದು ಪರಿಸ್ಥಿತಿಯನ್ನು ಮತ್ತಷ್ಟು ಗಂಭೀರಗೊಳಿಸಿದೆ. ಇಂತಹ ಕ್ರಮಗಳು ಸಂಸ್ಥೆಯ ಆಡಳಿತ ವ್ಯವಸ್ಥೆಯಲ್ಲಿ ಅಸ್ಥಿರತೆ ಉಂಟುಮಾಡುವುದಲ್ಲದೆ, ಹಣಕಾಸು ವ್ಯವಹಾರಗಳ ಮೇಲೂ ಅನುಮಾನ ಹುಟ್ಟಿಸುತ್ತವೆ ಎಂದು ಅವರು ಹೇಳಿದರು.

ನ್ಯಾಯಾಲಯದ ಮುಂದೆ ಎಲ್ಲರೂ ಸಮಾನರು ಎಂಬುದನ್ನು ನಾವು ನಂಬುತ್ತೇವೆ. ನಮ್ಮ ವಿರುದ್ಧ ತೀರ್ಪು ಬಂದಿದ್ದರೆ ಅದನ್ನು ಗೌರವಿಸಿ ಕಾನೂನಿನ ಪ್ರಕಾರ ಅಧಿಕಾರ ಹಸ್ತಾಂತರಿಸಲು ನಾವು ಸಂಪೂರ್ಣ ಸಿದ್ಧರಿದ್ದೇವೆ. ಆದರೆ ಅಧಿಕೃತ ಆದೇಶ ಪ್ರತಿ ಹೊರಬರುವ ಮುನ್ನವೇ ಆತುರದಲ್ಲಿ ಕ್ರಮ ಕೈಗೊಳ್ಳುವುದು ಪ್ರಜಾಸತ್ತಾತ್ಮಕ ವ್ಯವಸ್ಥೆಗೆ ವಿರುದ್ಧವಾಗಿದೆ ಎಂದು ಅಭಿಪ್ರಾಯ ಪಟ್ಟರು.

ಇನ್ನೊಂದೆಡೆ, ಗುರುವಾರ ಬೆಳಿಗ್ಗೆ ಆಡಳಿತ ಮಂಡಳಿ ಕಚೇರಿಗೆ ಬಂದು ಗುರುದೇವ್ ಹಾಗೂ ಬೂವನಹಳ್ಳಿ ಶ್ರೀನಿವಾಸ್ ಅವರು ಕಚೇರಿಯ ಬೀಗದ ಕೀಲಿಗಳನ್ನು ಬಲವಂತವಾಗಿ ತೆಗೆದುಕೊಂಡು ಹೋಗಿರುವುದಾಗಿ ಅವರು ಗಂಭೀರ ಆರೋಪ ಮಾಡಿದ್ದಾರೆ. ಈ ಸಂಬಂಧ ಸಂಬಂಧಪಟ್ಟ ಪೊಲೀಸ್ ಠಾಣೆಗೆ ದೂರು ನೀಡಲಾಗಿದ್ದು, ಎನ್‌ಸಿಆರ್ ದಾಖಲಾಗಿದೆ ಎಂದು ತಿಳಿಸಿದ್ದಾರೆ. ಈ ಘಟನೆ ಸಂಸ್ಥೆಯೊಳಗಿನ ಉದ್ವಿಗ್ನತೆಯನ್ನು ಮತ್ತಷ್ಟು ಹೆಚ್ಚಿಸಿದೆ. ಸಂಸ್ಥೆಯ ವಿವಿಧ ಘಟಕಗಳಲ್ಲಿ ಅನಗತ್ಯ ಗೊಂದಲ ಮತ್ತು ಅಶಾಂತಿ ಸೃಷ್ಟಿಸಲಾಗುತ್ತಿದೆ. ಕಳೆದ ಎರಡು ತಿಂಗಳಿಗೂ ಹೆಚ್ಚು ಕಾಲ ತೀರ್ಪಿಗಾಗಿ ಕಾಯಲಾಗಿದ್ದು, ಇನ್ನೇನು ನ್ಯಾಯಾಲಯದ ಅಧಿಕೃತ ಆದೇಶ ಪ್ರತಿ ವೆಬ್‌ಸೈಟ್‌ನಲ್ಲಿ ಲಭ್ಯವಾಗುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ. ಆ ಆದೇಶ ಹೊರಬಂದ ನಂತರ ಕಾನೂನಿನ ಪ್ರಕಾರ ಯಾವುದೇ ಗೊಂದಲವಿಲ್ಲದೆ ಅಧಿಕಾರ ಹಸ್ತಾಂತರಿಸಲು ನಾವು ಸಿದ್ಧವಿದ್ದೇವೆ ಎಂದು ಸ್ಪಷ್ಟಪಡಿಸಿದರು.

ಈ ನಡುವೆ ಹಿರಿಯರಾದ ಬಿ. ಆರ್. ಗುರುದೇವ್ ಅವರ ತಂಡ ತೆಗೆದುಕೊಳ್ಳುತ್ತಿರುವ ಆತುರದ ಹಾಗೂ ಏಕಪಕ್ಷೀಯ ಕ್ರಮಗಳು ಪರಿಸ್ಥಿತಿಯನ್ನು ಮತ್ತಷ್ಟು ಸಂಕೀರ್ಣಗೊಳಿಸುತ್ತಿವೆ. ನ್ಯಾಯಾ ಲಯದ ಅಂತಿಮ ಆದೇಶ ಬರುವವರೆಗೆ ಎಲ್ಲರೂ ಸಂಯಮ ವಹಿಸಿ ಕಾನೂನಿನ ಮರ್ಯಾದೆಯನ್ನು ಕಾಪಾಡಬೇಕು ಎಂದು ಅವರು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಮಲೆನಾಡು ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಜಿ. ಎಲ್. ಮುದ್ದೇಗೌಡ, ಖಜಾಂಚಿ ಎಚ್. ಡಿ. ಪಾರ್ಶ್ವನಾಥ್, ನಿರ್ದೇಶಕರಾದ ನಾಗರಾಜು, ಸುರೇಶ್ ಇತರರು ಉಪಸ್ಥಿತರಿದ್ದರು.

ಸುದ್ದಿ ಸಿಂಚನ

ಇಂದು ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಹಾಸನ: ಕಂದಾಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಮೇ 6ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಮಾಡಲಿರುವವರು. ಬೆಳಗ್ಗೆ 10 ಗಂಟೆಗೆ ಹಾಸನಾಂಬಾ ಕಲಾಕ್ಷೇತ್ರದಲ್ಲಿ ಏರ್ಪಡಿಸಲಾಗಿರುವ ಹಾಸನದ ಹೆಮ್ಮೆ 2026 ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ, ಅಂದು ಮಧ್ಯಾಹ್ನ 12.30ರಿಂದ 1.30 ಗಂಟೆಯವರೆಗೆ ಜಿಲ್ಲಾ ಪಂಚಾಯಿತಿಯ ಹೊಯ್ಸಳ ಸಭಾಂಗಣದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಿರುವವರು, ಮಧ್ಯಾಹ್ನ 1.30 ಕ್ಕೆ ಯಸಳೂರಿನಲ್ಲಿ ಏರ್ಪಡಿಸಲಾಗಿರುವ ಅರ್ಜುನ ಸ್ಮಾರಕ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ನಂತರ ಮೈಸೂರಿಗೆ ರಸ್ತೆ ಮೂಲಕ ತೆರಳಲಿದ್ದಾರೆ.

ಇಂದು ಜಿಲ್ಲೆಗೆ ಅರಣ್ಯ ಸಚಿವ ಈಶ್ವರ ಖಂಡ್ರೆ

ಹಾಸನ: ಅರಣ್ಯ ಸಚಿವರಾದ ಈಶ್ವರ ಖಂಡ್ರೆ ಅವರು ಮೇ 6ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಮಾಡಲಿರುವರು. ಮಧ್ಯಾಹ್ನ 4 ಗಂಟೆಗೆ ಯಸಳೂರಿಗೆ ಆಗಮಿಸಿ ಮ.4.30ಕ್ಕೆ ಅರ್ಜುನ ಸ್ಮಾರಕ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ನಂತರ ಬೆಂಗಳೂರಿಗೆ ರಸ್ತೆ ಮೂಲಕ ತೆರಳಲಿದ್ದಾರೆ.

ವಿವಿಧ ಸವಲತ್ತುಗಳಿಗೆ ಅರ್ಜಿ

ಹಾಸನ: ಅರಕಲಗೂಡು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿನ 2026-27ನೇ ಸಾಲಿನ ಎಸ್.ಎಫ್.ಸಿ. ನಿಧಿಯಡಿ ಶೇ.24.10, ಶೇ.7.25 ಮತ್ತು ಶೇ.5ರ ಪಟ್ಟಣ ಪಂಚಾಯಿತಿ ನಿಧಿಯಡಿ ಶೇ.24.10, ಶೇ.7.25 ಮತ್ತು ಶೇ. 5ರ ನಿಧಿಯಡಿ ವ್ಯಕ್ತಿ ಸಂಬಂಧಿತ ಕಾರ್ಯಕ್ರಮಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದ್ದು ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ. ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ, ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ಮಕ್ಕಳಿಗೆ ಪ್ರೋತ್ಸಾಹಧನ, ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ತರಬೇತಿ, ಪರಿಶಿಷ್ಟ ಪಂಗಡದ ಪಕ್ಕಾ ಮನೆ ದುರಸ್ತಿಗಾಗಿ ಸಹಾಯಧನ, ಪರಿಶಿಷ್ಟ ಪಂಗಡದ ಜನಾಂಗದವರಿಗೆ ವೈದ್ಯಕೀಯ ವೆಚ್ಚ ಭರಿಸಲು, ಆರ್ಥಿಕವಾಗಿ ಹಿಂದುಳಿದ ವರ್ಗದ ಜನಾಂಗದ ಫಲಾನುಭವಿಗಳಿಗೆ ಕಂಪ್ಯೂಟರ್ ತರಬೇತಿ, ಅರಕಲಗೂಡು ಪಟ್ಟಣ ಪಂಚಾಯಿತಿ ವ್ಯಾಪ್ತಿಯ ವಿಕಲಚೇತನರಿಗೆ ತ್ರಿಚಕ್ರ ವಾಹನ ಖರೀದಿಸಲು ಸಹಾಯಧನ ನೀಡಲಾಗುವುದು. ಅರ್ಜಿಯನ್ನು ಸಲ್ಲಿಸಲು ಆಸಕ್ತಿಯುಳ್ಳವರು ಕಚೇರಿಯಿಂದ ಅರ್ಜಿಗಳನ್ನು ಪಡೆದು ಮೇ.25ರ ಒಳಗೆ ನಿಗದಿಪಡಿಸಿರುವ ದಾಖಲಾತಿಗಳೊಂದಿಗೆ ಪಟ್ಟಣ ಪಂಚಾಯಿತಿಗೆ ಅರ್ಜಿ ಸಲ್ಲಿಸಬೇಕಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಕಲ್ಯಾಣ ಶಾಖೆಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಅಥವಾ ಅರಕಲಗೂಡು ಪಟ್ಟಣ ಪಂಚಾಯಿತಿ ವೆಬ್‌ಸೈಟ್ ಮೂಲಕ ಮಾಹಿತಿ ಪಡೆಯಬಹುದಾಗಿದೆ ಎಂದು ಅರಕಲಗೂಡು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಯಾವುದೇ ಅನುದಾನ ಹಿಂದಿರುಗಿಸಿಲ್ಲ: ಡೀಸಿ

ಶಾಸಕ ರೇವಣ್ಣ ಆರೋಪಕ್ಕೆ ಡೀಸಿ ಲತಾ ಕುಮಾರಿ ಪ್ರತಿಕ್ರಿಯೆ | ಮಳೆ ಹಾನಿಗೆ ಪರಿಹಾರ, ಕುಡಿಯುವ ನೀರಿಗೆ ಮುನ್ನೆಚ್ಚರಿಕೆ ಕ್ರಮ

• **ಕನ್ನಡಪ್ರಭ ವಾರ್ತೆ** ಹಾಸನ

ಯಾವುದೇ ಅನುದಾನವನ್ನು ನಾವು ಹಿಂದುರುಗಿಸಿಲ್ಲ ತಪ್ಪು ಎಂದು ಮಾಜಿ ಸಚಿವ ಎಚ್.ಡಿ. ರೇವಣ್ಣ ಹೇಳಿಕೆಗೆ ಸ್ಪಷ್ಟನೆ ನೀಡಿ, ಭ್ರಷ್ಟಾಚಾರಕ್ಕೂ ಅವಕಾಶವಿಲ್ಲ, ದೂರು ಬಂದರೇ ಈ ಬಗ್ಗೆ ಪರಿಶೀಲನೆ ಮಾಡಲಾಗುವುದು, ಮಳೆ ಹಾನಿಗೆ ಪರಿಹಾರ ಕೊಡಲಾಗುವುದು, ಈಗಾಗಲೇ ಕುಡಿಯುವ ನೀರಿಗೆ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಲಾಗಿದ್ದು, ಇನ್ನು ಖಾಸಗಿ ಆಸ್ಪತ್ರೆ ಬಗ್ಗೆ ಸಭೆ ಕರೆದು ಕಟ್ಟುನಿಟ್ಟಿನ ಸೂಚನೆ ಕೊಡಲಾಗುವುದು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಾಧ್ಯಮದೊಂದಿಗೆ ಮಾತನಾಡಿ, ಬೇಲೂರು- ಹಾಸನ ರೈಲ್ವೆ ಯೋಜನೆಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆಯಲ್ಲಿಯಾವುದೇರೀತಿಯವಿಳಂಬವಾಗಿಲ್ಲ. ಹಾಗೂ ಸಮಸ್ಯೆಗಳಿಲ್ಲ. ಯೋಜನೆಯಡಿಯಲ್ಲಿ 11.9 ಕಿಲೋಮೀಟರ್‌ವ್ಯಾಪ್ತಿಯಲ್ಲಿ ಭೂಸ್ವಾಧೀನ ಕಾರ್ಯ ಪೂರ್ಣಗೊಳ್ಳುವ ಹಂತದಲ್ಲಿದ್ದು, ಹೆಚ್ಚುವರಿ ಭೂಮಿ ಬೇಡಿಕೆಯ ಸಂದರ್ಭಗಳಲ್ಲಿ ಮಾತ್ರ ಕೆಲ ತಾಂತ್ರಿಕ ಅಡಚಣೆಗಳು ಎದುರಾಗಿವೆ ಎಂದು ಹೇಳಿದರು. ಮಾಜಿ ಸಚಿವರು ಮಾಡಿರುವ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ''ಯಾವುದೇ ಭ್ರಷ್ಟಾಚಾರ ನಡೆದಿದ್ದರೆ ಸೂಕ್ತ ದೂರು ನೀಡಿದರೆ ಪರಿಶೀಲನೆ ನಡೆಸಲಾಗುವುದು ಎಂದರು.



ಬೇಲೂರು-ಆಲೂರು ನಡುವೆ ಇರುವ27 ಗ್ರಾಮಗಳಲ್ಲಿ 4 ಗ್ರಾಮಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಪ್ರದೇಶಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದೆ. ಭೂ ಪರಿಹಾರದ ಹಣ ವಾಪಸ್ ಹೋಗಿದೆ ಎಂಬ ಮಾತುಗಳಲ್ಲಿ ಸತ್ಯಾಂಶವಿಲ್ಲ. ಈಗ ಸರ್ಕಾರವೇ ಪ್ರತ್ಯೇಕ ಖಾತೆಯನ್ನು ತೆರೆಯುವ ಮೂಲಕ ನೇರವಾಗಿ ಹಣ ಜಮೆ ಮಾಡುತ್ತಿದೆ ಎಂದು ವಿವರಿಸಿದರು. ಕಾಮಸಮುದ್ರ ಯೋಜನೆಗೆ ಸಂಬಂಧಿಸಿದಂತೆ ಭೂ ಕೋರಿಕೆ ಸಮಿತಿ ಸೂಚನೆ ಮೇರೆಗೆ ಮಾತ್ರ ಕ್ರಮ ಕೈಗೊಳ್ಳಲಾಗುತ್ತದೆ, ಜಿಲ್ಲಾಡಳಿತ ಸ್ವಯಂ ನಿರ್ಧಾರ ತೆಗೆದುಕೊಳ್ಳುವುದಿಲ್ಲ ಎಂದರು.

ಈ ವರ್ಷದ ಮಳೆಯ ಕುರಿತು ಮಾಹಿತಿ ನೀಡಿದ ಡಿಸಿ, ಜಿಲ್ಲೆಯಲ್ಲಿ ವಾಡಿಕೆಯಂತೆ 79.9 ಮಿ.ಮೀ ಮಳೆಯಾಗಬೇಕಿದ್ದರೆ ಕೇವಲ 55.2 ಮಿ.ಮೀ ಮಾತ್ರ ದಾಖಲಾಗಿದೆ ಎಂದು ಹೇಳಿದರು. ಇತ್ತೀಚೆಗೆ ಸುರಿದ ಗಾಳಿಮಳೆಯಿಂದ ಒಬ್ಬ ಮಹಿಳೆ ಹಾಗೂ 9 ಜಾನುವಾರುಗಳು ಮೃತಪಟ್ಟಿದ್ದು, ಎಲ್ಲಾ ಪ್ರಕರಣಗಳಿಗೆಪರಿಹಾರವಿತರಿಸಲಾಗಿದೆ. ಆಲೂರು ತಾಲೂಕಿನ ಮಾದಿಹಳ್ಳಿ ಗ್ರಾಮದ ನೀಲಮ್ಮ ಸಿಡಿಲಿಗೆ ಬಲಿಯಾಗಿದ್ದು, ಅವರ ಕುಟುಂಬಕ್ಕೆ 5 ಲಕ್ಷ ಪರಿಹಾರ ನೀಡಲಾಗಿದೆ. ಇನ್ನೂ ಮೂರು ಪ್ರಕರಣಗಳಿಗೂ ಪರಿಹಾರ ವಿತರಿಸಲಾಗಿದೆ ಎಂದರು. ಮಳೆಯಿಂದಾಗಿ 5 ದನದ ಕೊಟ್ಟಿಗೆಗಳು ಹಾನಿಗೊಂಡಿದ್ದು, 34 ಮನೆಗಳಿಗೆ ಭಾಗಶಃ ಹಾನಿ ಉಂಟಾಗಿದೆ. ಒಂದು ಮನೆ ಸಂಪೂರ್ಣ ಕುಸಿದಿದೆ. ಭಾಗಶಃ ಹಾನಿಗೊಳಗಾದ ಮನೆಗಳಿಗೆ 65 ಸಾವಿರ ಹಾಗೂ ಸಂಪೂರ್ಣ ಕುಸಿದ ಮನೆಗೆ 1.20 ಲಕ್ಷ ಪರಿಹಾರ ನೀಡಲಾಗುವುದು ಎಂದು ತಿಳಿಸಿದರು. ಬೇಸಿಗೆಯ ಹಿನ್ನಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಜಿಲ್ಲಾಡಳಿತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಫಲಿತಾಂಶದಲ್ಲಿ ಉತ್ತಮ ಸಾಧನೆ: ಈ ಬಾರಿ ಎಸ್ ಎಸ್ಎಲ್ಸಿ ಮತ್ತು ಪಿಯುಸಿ ಫಲಿತಾಂಶದಲ್ಲಿ ಜಿಲ್ಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ ಎಂದು ಸಂತೋಷ ವ್ಯಕ್ತಪಡಿಸಿದರು. ಮೇ 6ರಂದು ನಗರದ ಹಾಸನಾಂಬಾ ಕಲಾಕ್ಷೇತ್ರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಅತ್ಯುತ್ತಮ ಅಂಕ ಪಡೆದ 55 ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು, ಜೊತೆಗೆ ಬಾಲಮಂದಿರದ ವಿದ್ಯಾರ್ಥಿಗಳು, ವಿಕಲಚೇತನ ಮಕ್ಕಳನ್ನು ಕೂಡ ಸನ್ಮಾನಿಸಿ ಗೌರವಿಸಲಾಗುವುದು ಎಂದು ತಿಳಿಸಿದರು.

ಒಂದೊಂದು ಇಲಾಖೆಗೆ ಒಂದೊಂದು ಗುರಿ ನಿಗದಿಪಡಿಸಿದ್ದು, ಪೊಲೀಸ್ ಇಲಾಖೆ ತುಂಬಾ ಗಂಭೀರವಾಗಿ ತೆಗೆದುಕೊಂಡು ಡ್ರಗ್ಸ್ ನಿಯಂತ್ರಣ ಮಾಡಿದ್ದು, ಪ್ರತಿ ಫಾರ್ಮಸಿ ಅಂಗಡಿಗೆ ಭೇಟಿ ಮಾಡಿದ್ದು, ಪ್ರತಿ ಮೆಡಿಕಲ್ ಮುಂದೆ ಮಾದಕ ವಸ್ತುಗಳ ಮಾರಾಟ ನಿಷೇಧಿಸಲಾಗಿದೆ ಎನ್ನುವ ಎಚ್ಚರಿಕೆಯ ನಾಮಫಲಕ ಹಾಕಬೇಕು ಎನ್ನುವ ಸೂಚನೆ ಕೊಡಲಾಗಿದೆ. ಮಾದಕ ದ್ರವ್ಯವನ್ನಾಗಿ ಮಾಡುವುದನ್ನು ಬ್ಯಾನ್ ಮಾಡಿ, ಅಂತಹವರನ್ನು ಅನಧಿಕೃತವಾಗಿ ಯಾರು ಬಳಸುತ್ತಿದ್ದಾರೆ ಇಲ್ಲವೆ ನೀಡುತ್ತಿದ್ದಾರೆ ಅದರ ಮೇಲೆ ತಡೆ ಮಾಡಬೇಕು. ಟಾಸ್ಕ್‌ಫೋರ್ಸ್ ಟೀಮ್ ಮಾಡಬೇಕು. ಅಬಕಾರಿ ಇಲಾಖೆ, ಆರೋಗ್ಯ ಇಲಾಖೆಗೂ ಗುರಿ ಕೊಟ್ಟಿದ್ದೇವೆ. ಹೊಸದಾಗಿ ಹಿಮ್ಸ್ ಆಸ್ಪತ್ರೆಯಲ್ಲಿ ಡ್ರಗ್ಸ್ ಪರೀಕ್ಷೆಯ ಕೇಂದ್ರ ಪ್ರಾರಂಭಕ್ಕೆ ಸೂಚನೆ ಕೊಡಲಾಗಿದೆ. 40 ಬೆಡ್ ಇದ್ದು, ಇದರಲ್ಲಿ 10 ಬೆಡ್ ಡ್ರಗ್ಸ್ ಸಂಬಂಧಿಸಿದಂತೆ ಮೀಸಲಿಡಲಾಗಿದೆ. ನಮ್ಮ ಹಾಸನ ಜಿಲ್ಲೆಯಲ್ಲಿ ನಾಲ್ಕು ರಿಹ್ಯಾಬಿಲಿಟೇಶನ್ ಸೆಂಟರ್ ಇದೆ. ಇದರಲ್ಲಿ 184 ಜನ ಆಲ್ಕೋಹಾಲ್ ರೋಗಿಗಳು ಇದ್ದಾರೆ. ಇನ್ನೂ 5 ಜನ ಆಲ್ಕೋ ಹಾಲ್ ಮತ್ತು ಡ್ರಗ್ಸ್ ಎರಡನ್ನ ತೆಗೆದುಕೊಂಡವರು ಇದ್ದಾರೆ. ನಾವು ಪರಿಶೀಲನೆ ಮಾಡಿದಾಗ ಪೊಲೀಸ್ ಇಲಾಖೆಯಿಂದ ಸುಮಾರು ಕೇಸುಗಳು ಎಫ್ಐಆರ್ ಬುಕ್ ಆಗಿದೆ ಬಗ್ಗೆ ಮಾಹಿತಿ ತೆಗೆದುಕೊಂಡಿದ್ದೇವೆ. ಅರಣ್ಯ ಇಲಾಖೆಯಿಂದಲೂ ಮಾಹಿತಿ ಪಡೆಯಲಾಗಿದೆ. ಒಂದೊಂದು ಇಲಾಖೆಗೂ ಅವರವರ ಜವಾಬ್ದಾರಿ ಕೊಡಲಾಗಿದ್ದು, ಸವಾಲು ತುಂಬ ಇದ್ದು ಪ್ರಯತ್ನ ನಿರಂತರ ನಡೆಯುತ್ತಿದೆ ಎಂದರು. ಅಧಿಕಾರಿಗಳು ಯಾವ ಒತ್ತಡದಲ್ಲೂ ಕೆಲಸ ಮಾಡುವ ಅವಶ್ಯಕತೆ ಇಲ್ಲ, ನಿಯಮಾನುಸಾರ ಕೆಲಸ ಮಾಡಬೇಕು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ತಹಸೀಲ್ದಾರ್ ಗೀತಾ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ವಿದ್ಯುತ್, ಕುಡಿಯುವ ನೀರಿಗೆ ಆದ್ಯತೆ

ಆಲೂರಿನಲ್ಲಿ ವಿವಿಧ ಇಲಾಖೆ ಅಧಿಕಾರಿಗಳ ಜೊತೆ ಶಾಸಕ ಸಿಮೆಂಟ್ ಮಂಜು ಮಹತ್ವದ ಸಭೆ



• **ಕನ್ನಡಪ್ರಭ ವಾರ್ತೆ** ಆಲೂರು

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಸಕಲೇಶಪುರ, ಆಲೂರು, ಕಟ್ಟಾಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧಿಕಾರಿಗಳ ಮಹತ್ವದ ಸಭೆ ಕ್ಷೇತ್ರದ ಶಾಸಕ ಸಿಮೆಂಟ್ ಮಂಜು ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆಯಿತು. ಜನಸಾಮಾನ್ಯರು ಹಾಗೂ ರೈತರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಿ, ಅವುಗಳಿಗೆ ತ್ವರಿತ ಪರಿಹಾರ ಒದಗಿಸುವ ಕುರಿತು ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಲಾಯಿತು.

ಸಭೆಯಲ್ಲಿ ಮುಖ್ಯವಾಗಿ ರೈತರಿಗೆ ನಿರಂತರ ವಿದ್ಯುತ್ ಪೂರೈಕೆ ಕಲ್ಪಿಸುವ ಅಗತ್ಯತೆಯನ್ನು ಒತ್ತಿ ಹೇಳಲಾಯಿತು. ಗ್ರಾಮೀಣ ಭಾಗಗಳಲ್ಲಿ ಟಿ.ಸಿ ಸುಟ್ಟುಹೋಗುವ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ, ಅಂತಹ ಸಂದರ್ಭಗಳಲ್ಲಿ ವಿಳಂಬವಿಲ್ಲದೆ ಶೀಘ್ರ ದುರಸ್ತಿ ಕಾರ್ಯ ಕೈಗೊಳ್ಳಬೇಕು ಎಂದು ವಿದ್ಯುತ್ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.

ರೈತರ ಕೃಷಿ ಚಟುವಟಿಕೆಗಳಿಗೆ ಯಾವುದೇ ಅಡಚಣೆ ಉಂಟಾಗದಂತೆ ವಿದ್ಯುತ್ ಸರಬರಾಜು ಸುಗಮವಾಗಿರಬೇಕು ಎಂಬುದನ್ನು ಸಭೆಯಲ್ಲಿ ಪುನರುಚ್ಚರಿಸಲಾಯಿತು. ಇದರೊಂದಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ನೀರಾವರಿ ಹಾಗೂ ಸಂಬಂಧಿತ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ನೀರಿನ ಸರಬರಾಜು ವ್ಯವಸ್ಥೆ ನಿರಂತರವಾಗಿ ಕಾರ್ಯ ನಿರ್ವಹಿಸುವಂತೆ ನೋಡಿ ಕೊಳ್ಳಬೇಕೆಂದು ತಿಳಿಸಲಾಯಿತು. ಮಳೆಗಾಲಸಮೀಪಿಸುತ್ತಿರುವ ಹಿನ್ನೆಲೆ ರಸ್ತೆ ಬದಿಗಳಲ್ಲಿ ಬೆಳೆದಿರುವ ಗಿಡಗಂಟಿ, ಕಾಡುಜಂಗಲ್ ತೆರವುಗೊಳಿಸುವ ಕಾರ್ಯವನ್ನು ತ್ವರಿತಗತಿಯಲ್ಲಿ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು. ಇದರಿಂದ ಸಂಚಾರಕ್ಕೆ ಅಡ್ಡಿಯಾಗುವುದನ್ನು ತಪ್ಪಿಸುವುದಲ್ಲದೆ, ಅನಾಹುತಗಳನ್ನು ತಪ್ಪಿಸಲು ಸಹಾಯವಾಗುತ್ತದೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದು, ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಿ ಜನರ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಒದಗಿಸುವ ಭರವಸೆ ನೀಡಿದರು.

ಶ್ರೀ ಶಿವಲಿಂಗ ಮಹಾಸ್ವಾಮಿಗಳ 139ನೇ ಸ್ಮರಣಾರಾಧನೆ

ಕೋಡಿಮಠದಲ್ಲಿ ವೈಭವದ ಕಾರ್ಯಕ್ರಮ ಆಯೋಜನೆ: ಶ್ರೀಗಳ ಮಾಹಿತಿ

• **ಕನ್ನಡಪ್ರಭ ವಾರ್ತೆ** ಅರಸೀಕೆರೆ

ತಾಲೂಕಿನಸುಕ್ಷೇತ್ರ ಕೋಡಿಮಠದಲ್ಲಿಸುದ್ದಿಗಾರರೊಂದಿಗೆ ಮಾತನಾಡಿದ ಕೋಡಿಮಠದ ಪೀಠಾಧ್ಯಕ್ಷರಾದ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಗಳು, ಶ್ರೀ ಶಿವಲಿಂಗ ಸ್ವಾಮಿಗಳವರ 139ನೇ ವರ್ಷದ ಸ್ಮರಣಾರಾಧನೆ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಯೋಜಿಸಲಾಗಿದೆ ಎಂದು ತಿಳಿಸಿದರು.

ತಾಲೂಕಿನ ಕಣಕಟ್ಟೆ ಹೋಬಳಿಯ ಮಾಡಾಳು ಗ್ರಾಮದಲ್ಲಿರುವ ಶ್ರೀ ಮೂಲಸ್ಥಾನ ಸ್ವರ್ಣ ಗೌರಮ್ಮ ದೇವಾಲಯದಲ್ಲಿ ಮೇ 1ರಿಂದ ಪ್ರತಿದಿನ ಪುರಾಣ ಪ್ರವಚನವನ್ನು ಶ್ರೀ ಕಲ್ಲಿನಾಥ ಶಾಸ್ತ್ರಿಗಳವರಿಂದ ನಡೆಸಲಾಗುತ್ತಿದೆ. ಈ ಧಾರ್ಮಿಕ ಕಾರ್ಯಕ್ರಮಗಳು ಭಕ್ತರ ಆಧ್ಯಾತ್ಮಿಕ ಚೇತನೆಯನ್ನು ವೃದ್ಧಿಸುವ ಉದ್ದೇಶ ಹೊಂದಿವೆ ಎಂದು ಹೇಳಿದರು. ಮೇ 6, 2026ರಂದು ಬೆಳಗ್ಗೆ 9 ಗಂಟೆಗೆ ಶ್ರೀ ಶಿವಲಿಂಗ ಮಹಾಸ್ವಾಮಿಗಳವರ ಭಾವಚಿತ್ರದೊಂದಿಗೆ ಬೆಳ್ಳಿ ಪಲ್ಲಕ್ಕಿ ಉತ್ಸವವನ್ನು ದೇವಾಲಯದ ಆವರಣದಲ್ಲಿ ವಿಜೃಂಭಣೆಯಿಂದ ನೆರವೇರಿಸಲಾಗುವುದು. ನಂತರ ಬೆಳಗ್ಗೆ 11 ಗಂಟೆಗೆ ಸಭಾ ಕಾರ್ಯಕ್ರಮ ನಡೆಯಲಿದೆ. ಈ ಸಭಾ ಕಾರ್ಯಕ್ರಮವು ನೆಲಮಂಗಲ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀನಿವಾಸ್ ಅಧ್ಯಕ್ಷತೆ ವಹಿಸಲಿದ್ದಾರೆ. ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.



ಹರಗುರು ಚರಮೂರ್ತಿಗಳು ಭಕ್ತರಿಗೆ ಆಶೀರ್ವಚನ ನೀಡಲಿದ್ದು, ವಿವಿಧ ಗಣ್ಯರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಶ್ರೀಗಳು ತಿಳಿಸಿದರು.

ಸಭಾ ಕಾರ್ಯಕ್ರಮದ ನಂತರ ಭಕ್ತರಿಗೆ ದಾಸೋಹ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಜಯ ಭಾರತೀಯರ ಗೆಲುವು: ಸಿಮೆಂಟ್ ಮಂಜು

ಹಳೆಯ ಬಸ್ ನಿಲ್ದಾಣದಲ್ಲಿ ಬಿಜೆಪಿ ಕಾರ್ಯಕರ್ತರು ಶಾಸಕರ ನೇತೃತ್ವದಲ್ಲಿ ಸಿಹಿ ಹಂಚಿ ಸಂಭ್ರಮಾಚರಣೆ



• **ಕನ್ನಡಪ್ರಭ ವಾರ್ತೆ** ಸಕಲೇಶಪುರ

ಪಶ್ಚಿಮ ಬಂಗಾಳದ ಗೆಲುವು ಭಾರತೀಯರ ಗೆಲುವಾಗಿದೆ ಎಂದು ಸಕಲೇಶಪುರದ ಪಟ್ಟಣದಲ್ಲಿ ಸಂಭ್ರಮದ ವೇಳೆಕ್ಷೇತ್ರದ ಶಾಸಕ ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಂಚರಾಜ್ಯಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಭರ್ಜರಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಹಳೆಯ ಬಸ್ ನಿಲ್ದಾಣದಲ್ಲಿ ಬಿಜೆಪಿ ಕಾರ್ಯಕರ್ತರು ಶಾಸಕ ಸಿಮೆಂಟ್ ಮಂಜು ನೇತೃತ್ವದಲ್ಲಿ ಸೋಮವಾರ ಸಂಜೆ ಸಂಭ್ರಮಾಚರಣೆ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಬೇಕೆಂಬ ದಿವಂಗತ ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಕನಸು ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರ ಪರಿಶ್ರಮದಿಂದ ಇಂದು ನನಸಾಗಿದೆ ಎಂದು ಹೇಳಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದ ನಂತರ ಇದೇ ಮೊಟ್ಟ ಮೊದಲ ಬಾರಿಗೆ ಬಿಜೆಪಿ ಬಂಗಾಳದಲ್ಲಿ ಅಧಿಕಾರದ ಗದ್ದುಗೆ ಏರಿರುವುದು ಐತಿಹಾಸಿಕ ಸಾಧನೆಎಂದು ಹೇಳಿದರು. ಸುಮಾರು 15 ವರ್ಷಗಳ ಕಾಲ ಆಡಳಿತ ನಡೆಸಿದ ಮಮತಾ ಬ್ಯಾನರ್ಜಿ ಅವರ ಪಕ್ಷದ ಗೂಂಡಾಗಳು ಹಲವಾರು ಬಿಜೆಪಿ ಕಾರ್ಯಕರ್ತರನ್ನುಹತ್ಯೆ ಮಾಡಿದರೂ ಸಹ, ಗೂಂಡಾಗಿರಿ ಎದುರಿಸಿ ಪಕ್ಷವನ್ನು ಸಂಘಟಿಸಿದ ಪರಿಣಾಮ ಇಂದು ಅಧಿಕಾರಕ್ಕೆ ಬಂದಿದೆ ಎಂದು ತಿಳಿಸಿದರು. ಇದು ಹಿಂದುತ್ವದ ಹಾಗೂ ರಾಷ್ಟ್ರೀಯತೆಯ ಗೆಲುವು. ಪಕ್ಷದ ಗೆಲುವಿಗೆ ಶ್ರಮಿಸಿದ ಎಲ್ಲಾ ಮುಖಂಡರು ಹಾಗೂ ಕಾರ್ಯಕರ್ತರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದರು. ಇದೇ ರೀತಿ ಅಸ್ಸಾಂನಲ್ಲಿ ಬಿಜೆಪಿ ಸತತ ಮೂರನೇ ಬಾರಿಗೆ ಅಧಿಕಾರಕ್ಕೇರಿದ್ದು, ಪುದುಚೇರಿಯಲ್ಲಿ ಮಿತ್ರಪಕ್ಷಗಳೊಂದಿಗೆ ಬಿಜೆಪಿ ಸರ್ಕಾರ ರಚಿಸಿದೆ. ಕೇರಳದಲ್ಲಿ ಪ್ರಪ್ರಥಮ ಬಾರಿಗೆ ಬಿಜೆಪಿ ಮೂರು ಸ್ಥಾನಗಳನ್ನು ಗಳಿಸಿದೆ. ದೇಶಾದ್ಯಂತ ರಾಷ್ಟ್ರೀಯ ಚಿಂತನೆ ಬಲವಾಗುತ್ತಿದ್ದು, ಜನರು ಬಿಜೆಪಿ ಪಕ್ಷವನ್ನು ಹೆಚ್ಚಿನ ಸಂಖ್ಯೆಯಲ್ಲಿ ಬೆಂಬಲಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲೂ ಬದಲಾವಣೆ ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಹಳೆಯ ಬಸ್ ನಿಲ್ದಾಣದಲ್ಲಿ ಪ್ರಧಾನಿ ಮೋದಿ ಅವರ ಹೆಸರಿನಲ್ಲಿ ಚರ್ಮುರಿ ಹಾಗೂ ಸಿಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಿಸಲಾಯಿತು.

ಕಾರ್ಯಕ್ರಮದಲ್ಲಿ ಬಿಜೆಪಿ ತಾಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವತ್, ಟಿಎಪಿಸಿಎಂಎಸ್ ಅಧ್ಯಕ್ಷ ಶಶಿಕುಮಾರ್, ಆಟೋ ರವಿ, ವನಜಾಕ್ಷಿ, ಪ್ರದೀಪ್, ಮೇಘರಾಜ್, ಇಂದನ್, ಆಶೀರ್ವಾದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅರೇಹಳ್ಳಿಯಲ್ಲಿ ಮಿನಿ ಕ್ರಿಕೆಟ್ ಪಂದ್ಯಾವಳಿ ಯಶಸ್ವಿ:17 ತಂಡಗಳ ರೋಚಕ ಪೈಪೋಟಿ

ಬೇಲೂರು: ಅರೇಹಳ್ಳಿಯ ಸಂತೋಷ್ ನಗರದಲ್ಲಿ ಪ್ರಥಮ ಬಾರಿಗೆ ಸಂತೋಷನಗರ ಗೆಳೆಯರ ಬಳಗ ಹಾಗೂ ಹಿರಿಯ ನಾಗರಿಕರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ಲೀಗ್ ಮಾದರಿಯ ಮಿನಿ ಕ್ರಿಕೆಟ್ ಪಂದ್ಯಾವಳಿ ಅತ್ಯಂತ ಯಶಸ್ವಿಯಾಗಿ ನೆರವೇರಿತು.

ಎರಡು ದಿನಗಳ ಕಾಲ ನಡೆದ ಈ ಕ್ರೀಡಾಕೂಟದಲ್ಲಿ ಬೇಲೂರು ತಾಲೂಕು ಸೇರಿದಂತೆ ಸಕಲೇಶಪುರ ಮತ್ತು ಮೂಡಿಗೆರೆ ಭಾಗಗಳಿಂದ ಬಂದ ಸುಮಾರು 17 ತಂಡಗಳು ಭಾಗವಹಿಸಿಕ್ರೀಡಾಭಿಮಾನಿಗಳಿಗೆರೋಚಕಪೈಪೋಟಿಯನ್ನು ನೀಡಿದವು. ಪ್ರತಿಯೊಂದು ಪಂದ್ಯದಲ್ಲೂ ಆಟಗಾರರು ತೋರಿದ ಪ್ರತಿಭೆ ಮತ್ತು ಕ್ರೀಡಾಸ್ಫೂರ್ತಿ ಗಮನಸೆಳೆಯಿತು.

ಅಂತಿಮ ಪಂದ್ಯದಲ್ಲಿ ಬೇಲೂರು ತಾಲೂಕಿನ ಉಂಬಳಗೋಡು ಗ್ರಾಮದ ಅರುಣೋದಯ ತಂಡ ಅತ್ಯುತ್ತಮ ಪ್ರದರ್ಶನ ನೀಡಿ ಪ್ರಥಮ ಬಹುಮಾನವನ್ನು ತಮ್ಮದಾಗಿಸಿಕೊಂಡಿತು. ತೀವ್ರ ಪೈಪೋಟಿ ನೀಡಿದ ಭೀಮಾ ವಾರಿಯರ್ಸ್ ತಂಡ ದ್ವಿತೀಯ ಸ್ಥಾನ ಪಡೆದರೆ, ಮಲ್ನಾಡ್ ತಂಡ ತೃತೀಯ ಸ್ಥಾನ ಹಾಗೂ ಎಂ.ಸಿ.ಕೆ ತಂಡ ನಾಲ್ಕನೇ ಸ್ಥಾನ ಗಳಿಸಿತು.

ಬಿ ಎಸ್ ಯಡಿಯೂರಪ್ಪ 50 ವರ್ಷದ ರಾಜಕೀಯ ಪಯಣಕ್ಕೆ ಅಭಿಮಾನೋತ್ಸವ

9ರಂದು ಚಿತ್ರದುರ್ಗದಲ್ಲಿ ಆಯೋಜನೆ | ಸಮಾರಂಭದಲ್ಲಿ ಭಾಗಿಯಾಗಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ



• **ಕನ್ನಡಪ್ರಭ ವಾರ್ತೆ** ಬೇಲೂರು

ಯಡಿಯೂರಪ್ಪರ 50 ವರ್ಷದ ರಾಜಕೀಯ ಪಯಣಕ್ಕೆ ಅಭಿಮಾನೋತ್ಸವ ಕಾರ್ಯಕ್ರಮವನ್ನು ಮೇ 9ರಂದು ಚಿತ್ರದುರ್ಗದಲ್ಲಿ ಹಮ್ಮಿಕೊಂಡಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಲು ಶಾಸಕ ಎಚ್. ಕೆ. ಸುರೇಶ್ ಮನವಿ ಮಾಡಿದರು.

ತಮ್ಮ ಸ್ವಗೃಹದಲ್ಲಿ ಮಾತನಾಡಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷಗಳ ಸುದೀರ್ಘ ರಾಜಕೀಯ ಜೀವನದ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿ

ರಾಜಕೀಯದಲ್ಲಿ ಅನೇಕ ಏಳು ಬೀಳುಗಳನ್ನು ಎದುರಿಸಿ ಬೆಳೆದ ಯಡಿಯೂರಪ್ಪ ಅವರು ದಕ್ಷಿಣ ಭಾರತದ ಭದ್ರಕೋಟೆಯಂತೆ ಹೆಸರು ಮಾಡಿರುವ ನಾಯಕರು. ಜನಸಾಮಾನ್ಯರ ಹಿತದೃಷ್ಟಿಯಿಂದ ಕೆಲಸ ಮಾಡಿ ಅಪಾರ ಜನಮನ್ನಣೆ ಗಳಿಸಿದ್ದಾರೆ. ಅವರ ಅಭಿಮಾನೋತ್ಸವ ಕಾರ್ಯಕ್ರಮ ಇದೇ ತಿಂಗಳ 9ರಂದು ಚಿತ್ರದುರ್ಗದಲ್ಲಿ ನಡೆಯಲಿದ್ದು, ಸಚಿವ ಗೋವಿಂದ ಕಾರಜೋಳ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಈ ಮಹತ್ವದ ಕಾರ್ಯಕ್ರಮಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ, ವಿವಿಧ ರಾಜ್ಯಗಳ ನಾಯಕರು ಹಾಗೂ ಮಠಾಧೀಶರು ಆಗಮಿಸಲಿದ್ದಾರೆ ಎಂದು ತಿಳಿಸಿದರು. ಯಡಿಯೂರಪ್ಪ ಅವರು ಜಾತಿ, ಧರ್ಮ ಭೇದವಿಲ್ಲದೆ ಸಮಾನತೆ ತತ್ವದಡಿ ಆಡಳಿತ ನಡೆಸಿದ್ದು, ರೈತರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿ ಪ್ರತ್ಯೇಕ ರೈತ ಬಜೆಟ್ ಮಂಡಿಸಿದ ಏಕೈಕ ನಾಯಕರು. ಅವರ ಆಡಳಿತ ದಲ್ಲಿ ಕೃಷಿ ಕ್ಷೇತ್ರಕ್ಕೆ ವಿಶೇಷ ಆದ್ಯತೆ ನೀಡಲಾಗಿದ್ದು, ರೈತರ ಬದುಕು ಸುಧಾರಣೆಗೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಕಾರದಿಂದ ಪ್ರತಿಯೊಬ್ಬ ರೈತನ ಮನೆಗೆ ಆರ್ಥಿಕ ನೆರವು ತಲುಪಿಸುವ ಕೆಲಸ ನಡೆದಿದೆ ಎಂದು ಹೇಳಿದರು.

ವಿಶೇಷವಾಗಿ ಬೇಲೂರು ಭಾಗದಲ್ಲಿ ಜನರ ಹೋರಾಟದ ಫಲವಾಗಿ ಕೆರೆಗಳಿಗೆ ನೀರು ತುಂಬಿಸುವ ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದ್ದು, ಸುಮಾರು 18 ಕೋಟಿ ರೂ. ವೆಚ್ಚದಲ್ಲಿ ಜಾಕ್ವಲ್ ಯೋಜನೆಯಡಿ 57 ಕೆರೆಗಳನ್ನು ತುಂಬಿಸಲಾಗಿದೆ. ಇದರಿಂದ ರೈತರ ಕೃಷಿ ಚಟುವಟಿಕೆಗಳಿಗೆ ನೀರಿನ ಕೊರತೆ ನಿವಾರಣೆಯಾಗಿದ್ದು, ಜೀವನಮಟ್ಟ ಸುಧಾರಿಸಿದೆ. ಜೊತೆಗೆ ರಣಘಟ್ಟ ಯೋಜನೆಗೆ 127 ಕೋಟಿ ರು. ಮಂಜೂರಾಗಿದೆ. ಈ ಅಭಿಮಾನೋತ್ಸವ ಇತಿಹಾಸದಲ್ಲಿ ಸ್ಮರಣೀಯವಾಗಲಿದ್ದು ಈ ಕಾರ್ಯಕ್ರಮ ಯಶಸ್ವಿಯಾಗಲು ಕ್ಷೇತ್ರದ ಪ್ರತಿಯೊಬ್ಬ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಶಾಸಕರು ಮನವಿ ಮಾಡಿದರು. ಈ ಸಂದರ್ಭದ ಲ್ಲಿ ಬಿಜೆಪಿ ಮಂಡಲದ ಅಧ್ಯಕ್ಷ ಸಂಜು ಕೌರಿ, ಮಾಜಿ ಅಧ್ಯಕ್ಷ ಜಿ ಕೆ ಕುಮಾರ್, ಕಾರ್ಯದರ್ಶಿ ನವೀನ್, ಯುವ ಮೋರ್ಚ ಅಧ್ಯಕ್ಷ ಸುಮನ್, ಜಗದೀಶ್ ಹಾಜರಿದ್ದರು.

ಕಾರ್ಯಕ್ರಮಕ್ಕೆ ಹಾಸನ ಮಠಾಧೀಶರಿಗೆ ಆಹ್ವಾನ



ಹಾಸನ: ಕರ್ನಾಟಕದ ಮಾಜಿ ಮುಖ್ಯಮಂತ್ರಿ ಹಾಗೂ ಜನಪ್ರಿಯ ರಾಜಕೀಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷಗಳ ಜನಸೇವೆಯನ್ನು ಸ್ಮರಿಸುವ ಅಭಿಮಾನೋತ್ಸವ ಕಾರ್ಯಕ್ರಮ ಮೇ 9, 2026 ರಂದು ಶನಿವಾರ ಚಿತ್ರದುರ್ಗದಲ್ಲಿ ಭವ್ಯವಾಗಿ ನಡೆಯಲಿದೆ. ಈ ಕಾರ್ಯಕ್ರಮಕ್ಕೆ ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಮಠಾಧೀಶರು, ಲಕ್ಷಾಂತರ ಅಭಿಮಾನಿಗಳು ಸೇರಲಿದ್ದು, ಅದನ್ನು ಐತಿಹಾಸಿಕವಾಗಿ ಆಚರಿಸಲು ಸಿದ್ಧತೆಗಳು ನಡೆಯುತ್ತಿವೆ.

ಈ ಹಿನ್ನೆಲೆಯಲ್ಲಿ ಹಾಸನ ಜಿಲ್ಲೆಯ ಮಠಾಧೀಶರನ್ನು ಗೌರವಪೂರ್ವಕವಾಗಿ ಆಹ್ವಾನಿಸುವ ಕಾರ್ಯ ಕೈಗೊಳ್ಳಲಾಗಿದೆ. ಸುಮಾರು ಇಪ್ಪತ್ತೈದು ಸ್ವಾಮೀಜಿಗಳಿಗೆ ಫಲತಾಂಬೂಲ ನೀಡಿ, ಕಾರ್ಯಕ್ರಮದ ಆಹ್ವಾನ ಪತ್ರಿಕೆಯನ್ನು ನೀಡುವ ಮೂಲಕ ಸನ್ಮಾನಿಸಿ ಆಹ್ವಾನಿಸಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಲಾಗಿದ್ದು, ಮಠಾಧೀಶರು ಸಹ ಉತ್ಸಾಹದಿಂದ ಸ್ವೀಕರಿಸಿದ್ದಾರೆ.

ಹಾಸನ ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿದ್ದೇಶ್ ನಾಗೇಂದ್ರ ಅವರ ಮಾರ್ಗದರ್ಶನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಸನ ತಾಲೂಕು ಘಟಕದ ಅಧ್ಯಕ್ಷ ಕಟ್ಟಾಯ ಶಿವಕುಮಾರ್‌ನೇತೃತ್ವದಲ್ಲಿ ಈ ಆಹ್ವಾನ ಕಾರ್ಯಕ್ರಮ ನಡೆಯಿತು. ವಿವಿಧ ಮಠಗಳಿಗೆ ಭೇಟಿ ನೀಡಿ ಸ್ವಾಮೀಜಿಗಳನ್ನು ಆಹ್ವಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಯಡಿಯೂರಪ್ಪ ಅವರು ಕಳೆದ ಐದು ದಶಕಗಳಿಂದ ಅಪಾರ ಸೇವೆ ಸಲ್ಲಿಸಿದ್ದಾರೆ. ಅವರ ರಾಜಕೀಯ ಜೀವನವನ್ನು ಗೌರವಿಸುವ ಉದ್ದೇಶದಿಂದ ಈ ಅಭಿಮಾನೋತ್ಸ ಆಯೋಜಿಸಲಾಗಿದೆ ತಿಳಿಸಿದರು.

ಹಿಂದೂ ಮುಖಂಡ ಅರುಣ್ ಕುಮಾರ್ ಪ್ರಕರಣಕ್ಕೆ ಹೈಕೋರ್ಟ್‌ನಿಂದ ತಡೆಯಾಜ್ಞೆ

"ಸತ್ಯಕ್ಕೆ ಸಂದ ಜಯ": ಹಿಂದೂ ಮಹಾಸಂಗಮ ಸಮಿತಿ ಪ್ರತಿಕ್ರಿಯೆ



• **ಕನ್ನಡಪ್ರಭ ವಾರ್ತೆ** ಅರಸೀಕೆರೆ

ನಗರದಲ್ಲಿ ಇತ್ತೀಚಿಗೆ ನಡೆದ ಗಲಾಟೆ ಹಾಗೂ ನಂತರದ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಹಿಂದೂ ಮುಖಂಡ ಟಿ.ವಿ. ಅರುಣ್ ಕುಮಾರ್ ಅವರ ವಿರುದ್ಧ ದಾಖಲಾಗಿದ್ದ ಪ್ರಕರಣಕ್ಕೆ ಕರ್ನಾಟಕ ಉಚ್ಚ ನ್ಯಾಯಾಲಯವು ಕ್ರಿಮಿನಲ್ ಪಿಟೀಷನ್ ತಡೆ ನೀಡಿರುವುದು ''ಸತ್ಯಕ್ಕೆ ಸಂದ ಜಯ'' ಎಂದು ಹಿಂದೂ ಮಹಾಸಂಗಮ ಆಯೋಜನಾ ಸಮಿತಿ ಘೋಷಿಸಿದೆ.

ನಗರದ ವಿ.ಜೆ.ಆರ್ ಕನ್ವೆನ್ಷನ್ ಹಾಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ವಕೀಲರಾದ ವಿವೇಕ್ ಮಾತನಾಡಿ, ಕಳೆದ ತಿಂಗಳು ಬಿ. ಎಚ್. ರಸ್ತೆ ಟ್ರೆಂಡ್ಸ್ ಮತ್ತು ಎಪಿಎಂಸಿ ಗೇಟ್ ನಡುವಿನ ಪ್ರದೇಶದಲ್ಲಿ ಸೂಫಿಯನ್ ಸಮೀವುಲ್ಲಾ ಹಾಗೂ ಆತನ ಸಹಚರರು ನಡೆಸಿದ ಗೂಂಡಾಗಿರಿ, ಹಲ್ಲೆ ಪ್ರಕರಣವನ್ನು ಗಂಭೀರವಾಗಿ ಉಲ್ಲೇಖಿಸಿದರು. ದಿನದ ಹೊತ್ತಲ್ಲೇ ನಡೆದ ಈ ಘಟನೆ ಕಾನೂನು ಸುವ್ಯವಸ್ಥೆಗೆ ಧಕ್ಕೆ ತಂದುಕೊಟ್ಟಿದ್ದು, ಆರೋಪಿಗಳನ್ನು ಬಂಧಿಸುವಲ್ಲಿ ವಿಳಂಬ ತೋರಿದ ಪೊಲೀಸ್ ಇಲಾಖೆ ಕ್ರಮದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಘಟನೆಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದ ಸಮಾಜದ ಮುಖಂಡರ ಮೇಲೆಯೇ ಪ್ರಕರಣ ದಾಖಲಿಸಿರುವುದು ವಿಪರ್ಯಾಸವಾಗಿದ್ದು, ಇದಕ್ಕೆ ಯಾವ ರೀತಿಯ ಒತ್ತಡಗಳು ಕಾರಣವೆಂಬುದನ್ನು ಪೊಲೀಸ್ ಇಲಾಖೆ ಸ್ಪಷ್ಟಪಡಿಸಬೇಕೆಂದು ಆಗ್ರಹಿಸಿದರು. ನಿಜವಾದ ಆರೋಪಿಗಳನ್ನು ಬಿಟ್ಟು, ನ್ಯಾಯಕ್ಕಾಗಿ ಹೋರಾಡಿದವರನ್ನೇ ಗುರಿಯಾಗಿಸಿರುವುದು ಕಾನೂನು ವ್ಯವಸ್ಥೆಯ ಮೇಲಿನ ವಿಶ್ವಾಸ ಕುಗ್ಗಿಸುವಂತಾಗಿದೆ ಎಂದು ಕಿಡಿಕಾರಿದರು.

ಈ ಸಂಬಂಧ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಹಿಂದೂ ಸಮಾಜದ ಪ್ರತಿಭಟನೆಯನ್ನು ''ದೊಂಬರಾಟ'' ಎಂದು ಕರೆದಿರುವುದನ್ನು ತೀವ್ರವಾಗಿ ಖಂಡಿಸಿದ ಅವರು ಕೂಡಲೇ ಸಾರ್ವಜನಿಕ ಕ್ಷಮೆಯಾಚನೆ ಮಾಡಬೇಕು ಎಂದು ಒತ್ತಾಯಿಸಿದರು. 2012ರಲ್ಲಿ ನಡೆದ ಗಣಪತಿ ಗಲಾಟೆಯನ್ನು ''ಸಣ್ಣ ಘಟನೆ'' ಎಂದು ಹೇಳಿರುವುದನ್ನೂ ವಿರೋಧಿಸಿ, ಆ ಘಟನೆಯಿಂದ ನಗರದ ಪ್ರಸಿದ್ಧ ಉತ್ಸವದ ಗೌರವ ಕುಗ್ಗಿದ ಸಂಗತಿಯನ್ನು ಮರೆಯಬಾರದು ಎಂದು ಟೀಕಿಸಿದರು.

2012ರ ಗಣಪತಿ ಗಲಾಟೆಯಲ್ಲಿ ನೂರಾರು ಮಂದಿ ದೀರ್ಘಕಾಲ ನ್ಯಾಯಾಲಯದ ಸುತ್ತಾಟಕ್ಕೆ ಒಳಗಾದ ವಿಚಾರವನ್ನು ಉಲ್ಲೇಖಿಸಿ, ಆ ಸಂದರ್ಭದಲ್ಲಿ ರಾಜಕೀಯ ಒತ್ತಡಗಳು ಕೆಲಸ ಮಾಡಿದ್ದವೆಯೇ ಎಂಬುದನ್ನು ಸ್ಪಷ್ಟಪಡಿಸಬೇಕೆಂದು ಒತ್ತಾಯಿಸಿದರು. ಆ ಸಂದರ್ಭದಲ್ಲಿ ಗಣಪತಿ ಮಂಡಳಿಯ ಅಧ್ಯಕ್ಷರಾಗಿದ್ದವರ ವಿರುದ್ಧ ಕ್ರಮ ಕೈಗೊಳ್ಳದಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿಂದೂ ಮುಖಂಡ ಕೃಷ್ಣ ಹುಳಿಯಾರು ರಸ್ತೆಯಲ್ಲಿ ಹಿಂದೂ ಮೆರವಣಿಗೆಗೆ ಅವಕಾಶ ನೀಡದಿರುವ ವಿಚಾರದಲ್ಲಿ ತೀವ್ರ ಆಕ್ಷೇಪ ವ್ಯಕ್ತಪಡಿಸಿ, ಇದು ಸಂವಿಧಾನದ ಸಮಾನ ಹಕ್ಕುಗಳ ತತ್ವಕ್ಕೆ ವಿರುದ್ಧವಾಗಿದೆ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಎಲ್ಲಾ ಮೆರವಣಿಗೆಗಳಿಗೆ ಸಮಾನ ಅವಕಾಶ ಕಲ್ಪಿಸದಿದ್ದರೆ ಹೋರಾಟ ತೀವ್ರಗೊಳ್ಳಲಿದೆ ಎಂದು ಎಚ್ಚರಿಸಿದರು.

ವಕೀಲರಾದ ಶಿವರಾಜ್ ಕೆಂಪುಸಾಗರ್‌ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಅರಸೀಕೆರೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಪೊಲೀಸ್ ಇಲಾಖೆಯ ವೈಫಲ್ಯದಿಂದ ಪುಂಡಾಟಿಕೆ ಹೆಚ್ಚಾಗಿದೆ ಎಂದು ಆರೋಪಿಸಿದರು.


ಕಾಲೇಜುಗಳ ಸುತ್ತ ನಂಬರ್ ಪ್ಲೇಟ್ ಇಲ್ಲದ ಬೈಕ್‌ಗಳಲ್ಲಿ ಸಂಚರಿಸುವ ಯುವಕರಿಂದ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ವಿಶೇಷವಾಗಿ ಯುವತಿಯರ ಮೇಲೆ ಪ್ರಭಾವ ಬೀರುವ ಘಟನೆಗಳು ಹೆಚ್ಚುತ್ತಿರುವುದಾಗಿ ಆತಂಕ ವ್ಯಕ್ತಪಡಿಸಿದರು. ಇದನ್ನು ತಕ್ಷಣ ನಿಯಂತ್ರಿಸದಿದ್ದರೆ ಮತ್ತೊಮ್ಮೆ ಉಗ್ರ ಹೋರಾಟ ಕೈಗೊಳ್ಳುವುದಾಗಿ ಎಚ್ಚರಿಸಿದರು. ಇನ್ನೂ, ಹಿಂದೂ ಮಹಾಸಂಗಮ ಕಾರ್ಯಕ್ರಮಕ್ಕೆ ಅನುಮತಿ ಪಡೆಯಲು ನ್ಯಾಯಾಲಯದ ಮೊರೆ ಹೋಗಬೇಕಾದ ಪರಿಸ್ಥಿತಿ ಉಂಟಾಗಿರುವುದನ್ನೂ ಉಲ್ಲೇಖಿಸಿದ ಅವರು, ಸಮಾಜದ ಧಾರ್ಮಿಕ ಕಾರ್ಯಕ್ರಮಗಳಿಗೂ ಅಡ್ಡಿಗಳು ಎದುರಾಗುತ್ತಿರುವುದು ದುರಂತಕರ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜಿ.ವಿ.ಟಿ ಬಸವರಾಜ್, ಶಿವನಂಜೇಗೌಡ, ಹಿರಿಯ ಮುಖಂಡರಾದ ನವಲಗುಂದ್, ಶೇಖರ್, ಜಯಶ್ರೀ , ಗಿರೀಶ್. ಹರ್ಷವರ್ಧನ್ ಪುರುಷೋತ್ತಮ್ ಹಾಗೂ ಮುಂತಾದವರು ಉಪಸ್ಥಿತರಿದ್ದರು.

ದೊಡ್ಮನೆ ಆನಂದ್ ಕೃತಿಯ ಸಂವಾದ-ವಿಮರ್ಶೆ

ಹಾಸನ: ಜಿಲ್ಲೆಯ ಖ್ಯಾತ ಸಾಹಿತಿ ದೊಡ್ಮನೆ ಆನಂದ್ ಅವರ ಕನ್ನಂಬಾಡಿ ಜೋಡಿ ಕೊಲೆಯ ರಹಸ್ಯ ಕೃತಿಯನ್ನು ಆಧಾರವಾಗಿಟ್ಟುಕೊಂಡು ಹಾಸನದ ಸಪ್ನ ಬುಕ್ ಹೌಸ್ನಲ್ಲಿ ಸಂವಾದ ಮತ್ತು ವಿಮರ್ಶಾ ಕಾರ್ಯಕ್ರಮ ಅರ್ಥಪೂರ್ಣವಾಗಿ ಯಶಸ್ವಿಯಾಗಿ ನಡೆಯಿತು. ಸಾಹಿತ್ಯಾಸಕ್ತರು, ವಿದ್ಯಾರ್ಥಿಗಳು ಹಾಗೂ ಗಣ್ಯರ ಉಪಸ್ಥಿತಿಯಲ್ಲಿ ನಡೆದ ಈ ಕಾರ್ಯಕ್ರಮವು ಓದಿನ ಸಂಸ್ಕೃತಿಗೆ ಹೊಸ ಉತ್ತೇಜನ ನೀಡುವಂತಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಗೊರೂರು ಶಿವೇಶ್ ಅವರು ಕೃತಿಯ ಕಥಾವಸ್ತು, ನಿರೂಪಣಾ ಶೈಲಿ ಹಾಗೂ ಓದುಗರನ್ನು ಸೆಳೆಯುವ ರೀತಿಯ ಬಗ್ಗೆ ವಿವರವಾಗಿ ಮಾತನಾಡಿದರು. ಬಳಿಕ ಮೇಟಿಕೆರೆ ಹಿರಿಯಣ್ಣ ಅವರು ದೊಡ್ಮನೆ ಆನಂದ್ ಅವರ ಸಮಗ್ರ ಸಾಹಿತ್ಯ ಸಾಧನೆಯನ್ನು ವಿಮರ್ಶಾತ್ಮಕವಾಗಿ ವಿಶ್ಲೇಷಿಸಿ, ಅವರ ಬರವಣಿಗೆಯ ವೈಶಿಷ್ಟ್ಯ, ಸಮಾಜಮುಖಿ ಚಿಂತನೆ ಹಾಗೂ ವ್ಯಕ್ತಿತ್ವದ ಕುರಿತಾಗಿ ಆಳವಾದ ಅಭಿಪ್ರಾಯಗಳನ್ನು ಹಂಚಿಕೊಂಡರು. ಅವರು



ಓದಿನ ಸಂಸ್ಕೃತಿ ಬೆಳೆಸಲು ಸಪ್ನ ಬುಕ್ ಹೌಸ್ ಮಹತ್ವದ ವೇದಿಕೆ ಆನಂದ್ ಅವರ ಸಾಹಿತ್ಯವು ಓದುಗರಲ್ಲಿ ಕುತೂಹಲ ಹುಟ್ಟಿಸುವುದರ ಜೊತೆಗೆ ವಿಚಾರಪ್ರೇರಣೆಯನ್ನೂ ನೀಡುತ್ತದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎ.ವಿ.ಕೆ ಕಾಲೇಜಿನ ಪ್ರಾಂಶುಪಾಲ ಡಾ. ಯತೀಶ್ ವಹಿಸಿ ಮಾತನಾಡಿ, ಇಂದಿನ ಡಿಜಿಟಲ್ ಯುಗದಲ್ಲಿ ಪುಸ್ತಕ ಓದುವ ಅಭ್ಯಾಸ ಕಡಿಮೆಯಾಗುತ್ತಿರುವುದರ ಬಗ್ಗೆ ಕಳವಳ ವ್ಯಕ್ತಪಡಿಸಿ, ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಜೊತೆಗೆ ಓದಿನ ಹವ್ಯಾಸ ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯ ಎಂದು ತಿಳಿಸಿದರು.